ಶುಕ್ರವಾರ, 18–ಜುಲೈ 2025 | ಪುಟ–06 | ಮಾಸಿಕ ಚಂದಾ : 75/– | ಮಾಸಿಕ ರೂ. : 60/–

ಶಿವಮೊಗ್ಗ | ದಾವಣಗೆರೆ | ಚಿತ್ರದುರ್ಗ | ತುಮಕೂರು | ರಾಮನಗರ | ಬೆಂಗಳೂರು ಗ್ರಾಮಾಂತರ | ಚಿಕ್ಕಬಳ್ಳಾಪುರ

# ಕ್ರಾಂತಿ ದೀಪ

ಮಧ್ಯ ಕರ್ನಾಟಕದ ಪ್ರಪ್ರಥಮ ಪ್ರಾದೇಶಿಕ ಕನ್ನಡ ದಿನಪತ್ರಿಕೆ

KRANTHI DEEPA REGIONAL KANNADA DAILY

ಸಂಪಾದಕ: ಎನ್.ಮಂಜುನಾಥ್

R.N.I.No. KARKAN/2000/01010 Reg. No.KA/SK/SMG/210/2024-26 volume :40, issue : 294 ದೂರವಾಣಿ : 08182-273909, 9448628499 Email:kranthideepa@gmail.com Website : www.kranthideepanews.in

**ಮುಂಜಾನೆ ಮಾತು**

ಹಣದ ಬಲದಿಂದ ಮೇಲಕ್ಕೆ ಬಂದವನು ಹಣ ಇರುವ ಮನುಷ್ಯರಿಗೆ ಮಾತ್ರ ಗೌರವ ಕೊಡುತ್ತಾನೆ. ಆದರೆ ಕಷ್ಟಪಟ್ಟು ಮೇಲಕ್ಕೆ ಬಂದವನು ಕಷ್ಟಪಡುವ ಪ್ರತಿ ಮನುಷ್ಯನಿಗೂ ಗೌರವ ಕೊಡುತ್ತಾನೆ.




ವೆಸ್ಟ್ ಇಂಡೀಸ್‌ನ ಕ್ರಿಕೆಟ್ ತಂಡದ ಹಿರಿಯ ಆಲ್‌ರೌಂಡ್ ಆಟಗಾರ ಯ್ಯಾಂಡ್ರೆ ರಸೆಲ್ 15 ವರ್ಷಗಳ ವೃತ್ತಿಜೀವನಕ್ಕೆ ವಿದಾಯ ಘೋಷಿಸಿದ್ದಾರೆ. ಜು. 22ರಂದು ಆಸ್ಟ್ರೇಲಿಯಾ ವಿರುದ್ಧ ನಡೆಯಲಿರುವ ಎರಡನೇ ಟಿ20 ಪಂದ್ಯದ ಮೂಲಕ 37 ವರ್ಷದ ರಸೆಲ್ ಅಂತರರಾಷ್ಟ್ರೀಯ ಕ್ರಿಕೆಟ್ ಬದುಕಿಗೆ ತೆರೆ ಎಳೆಯಲಿದ್ದಾರೆ.

## ಕಾಲ್ತುಳಿತಕ್ಕೆ ಆರ್‌ಸಿಬಿ, ಡಿಎನ್‌ಎ, ಕೆಎಸ್‌ಸಿಎ ಕಾರಣ




**ಬೆಂಗಳೂರು,ಜು.17:**

11 ಜನರ ಸಾವಿಗೆ ಕಾರಣವಾದ ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಆವರಣದಲ್ಲಿ ನಡೆದ ಕಾಲ್ತುಳಿತ ದುರಂತಕ್ಕೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಕಾರಣ ಎಂದು ಕರ್ನಾಟಕ ಸರ್ಕಾರದ ವರದಿ ಹೇಳಿದೆ.

ಬೆಂಗಳೂರು ಕಾಲ್ತುಳಿತಕ್ಕೆ ಕರ್ನಾಟಕ ಸರ್ಕಾರ ಆರ್‌ಸಿಬಿಯನ್ನು ದೂಷಿಸಿದ್ದು, ಪೂರ್ವಾನುಮತಿ ಇಲ್ಲದೆ ಅಥವಾ ನಗರ ಅಧಿಕಾರಿಗಳಿಗೆ ಕಡ್ಡಾಯ ವಿವರಗಳನ್ನು ನೀಡದೆ ಏಕಪಕ್ಷೀಯವಾಗಿ ಆರ್‌ಸಿಬಿಯ ಬೃಹತ್ ವಿಜಯೋತ್ಸವ ಮೆರವಣಿಗೆ ಮತ್ತು ಆಚರಣೆಯನ್ನು ಆಯೋಜಿಸಿದ್ದಕ್ಕಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಅವರ ಈವೆಂಟ್ ಮ್ಯಾನೇಜ್‌ಮೆಂಟ್ ಪಾಲುದಾರ ಮೆಸರ್ಸ್ ಡಿಎನ್‌ಎ ನೆಟ್‌ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಮತ್ತು ಕೆಎಸ್‌ಸಿಎ ವಿರುದ್ಧ ಆರೋಪ ಹೊರಿಸಲಾಗಿದೆ.

**ಅನುಮತಿ ಇರಲಿಲ್ಲ:** ತಂಡದ ವಿಜಯೋತ್ಸವಕ್ಕೆ ಪೊಲೀಸ್ ಇಲಾಖೆಯಿಂದ ಅನುಮತಿ ಇರಲಿಲ್ಲ. ತಂಡದ ಆಡಳಿತ ಮಂಡಳಿ ರಾಜ್ಯ ಸರ್ಕಾರವನ್ನಾಗಲೀ ಅಥವಾ ಪೊಲೀಸ್ ಇಲಾಖೆಯ ಅನುಮತಿ ಪಡೆದಿರಲಿಲ್ಲ. ದಿಢೀರ್ ಕಾರ್ಯಕ್ರಮ ಘೋಷಣೆ ಮಾಡಿದ್ದರಿಂದ ಹಠಾತ್ತನೆ ಜಮಾಯಿಸಿದ ಜನಸಮೂಹ ನೂಕು ನುಗ್ಗಲು ಉಂಟಾಯಿತು ಎಂದು ಕರ್ನಾಟಕ ಸರ್ಕಾರದ ವರದಿ ಹೇಳುತ್ತದೆ.




ಕಾಲ್ತುಳಿತ ಪ್ರಕರಣ : ಸಂಪುಟ ಸಭೆಯಲ್ಲಿ ನಿರ್ಧಾರ

# ಕುನ್ಹಾ ವರದಿಯ ಮೇಲೆ ಕ್ರಮ



**ಬೆಂಗಳೂರು,ಜು.17:**

ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣ ಸಂಬಂಧ ನ್ಯಾ.ಜಾನ್ ಮೈಕಲ್ ಕುನ್ಹಾ ವರದಿಯನ್ನು ಸಚಿವ ಸಂಪುಟ ಸಭೆ ಅಂಗೀಕರಿಸಿದ್ದು, ಈ ಬಗ್ಗೆ ಚರ್ಚಿಸಿ, ಕ್ರಮಗಳ ಕುರಿತು ಶೀಘ್ರದಲ್ಲಿಯೇ ನಿರ್ಧಾರ ಪ್ರಕಟಿಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಹೇಳಿದರು.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ.4ರಂದು ಆರ್‌ಸಿಬಿ ಕ್ರಿಕೆಟ್ ತಂಡದ ವಿಜಯೋತ್ಸವ ಸಮಾರಂಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉಂಟಾದ ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಹೈಕೋರ್ಟಿನ ನಿವೃತ್ತ ನ್ಯಾಯಾಧೀಶ ಜಾನ್ ಮೈಕಲ್ ಕುನ್ಹಾ ಅವರ ನೇತೃತ್ವದ ಏಕ ಸದಸ್ಯ ವಿಚಾರಣಾ ಆಯೋಗದ ವರದಿಯ ಮೇಲೆ ಕ್ರಮವಹಿಸಲು ಸಚಿವ ಸಂಪುಟ ನಿರ್ಧರಿಸಿದೆ ಎಂದು ಹೇಳಿದರು.

ಕುನ್ಹಾ ಅವರ ಏಕಸದಸ್ಯ ಆಯೋಗ ನೀಡಿರುವ ತನಿಖಾ ವರದಿಯಲ್ಲಿ ಪೊಲೀಸ್ ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಸಂಬಂಧಿಸಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ವರದಿಯಲ್ಲೂ ಶಿಫಾರಸು ಮಾಡಲಾಗಿದೆ. ಈ ಬಗ್ಗೆ ಯಾವ ಕ್ರಮ ಕೈಗೊಳ್ಳಬೇಕೆಂದು ಚರ್ಚೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಪ್ರಕಟಿಸಲಾಗುವುದು ಎಂದರು.

### ಸಭೆಯ ನಿರ್ಣಯಗಳು

- ರಾಜ್ಯದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪಿಸಲು ತಾತ್ವಿಕ ಅನುಮೋದನೆ ಹಾಗೂ ಎನ್ ಟಿಪಿಸಿ ಸಂಸ್ಥೆಯು ಕರ್ನಾಟಕದಲ್ಲಿ ಪರಮಾಣು ವಿದ್ಯುತ್ ಸ್ಥಾಪನೆಗೆ ಗುರುತಿಸಿರುವ ಸಂಭಾವ್ಯ ಸ್ಥಳಗಳ್ಲಿ ಪ್ರಾಥಮಿಕ ಅಧ್ಯಯನ ನಡೆಸಲು ಅನುಮತಿ.
- ಆಯುಷ್ ಇಲಾಖೆಯ ಆಯುರ್ವೇದ, ಸಿದ್ದ ಮತ್ತು ಯುನಾನಿ ಔಷಧಗಳ ಅಮಲುಜಾರಿ ವಿಭಾಗ ಹಾಗೂ ಪರೀಕ್ಷಾ ಪ್ರಯೋಗಾಲಯವನ್ನು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಜೊತೆಗೆ ವಿಲೀನ.
- ಚಿಕ್ಕಬಳ್ಳಾಪುರ ಜಿಲ್ಲೆ, ಮಂಡಿಕಲ್ಲು ಹೋಬಳಿ, ಯರಮಾರೇನಹಳ್ಳಿ ಗ್ರಾಮದಲ್ಲಿ 5–23 ಎಕರೆ / ಗುಂಟೆ ಸರ್ಕಾರಿ ಬೀಳು ಜಮೀನನ್ನು ಅಕ್ಷಯ ಪಾತ್ರೆ ಅಡುಗೆ ಮನೆ ಮತ್ತು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದ ಗ್ರಾಮೀಣ ಮಕ್ಕಳಿಗೆ ಶಾಲಾ ಕಟ್ಟಡ ನಿರ್ಮಾಣಕ್ಕಾಗಿ, ಇಸ್ಕಾನ್ ಬೆಂಗಳೂರು ಇವರಿಗೆ ಮಂಜೂರು.
- ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ವೀರಭದ್ರನ ಪಾಳ್ಯ ಗ್ರಾಮದ ಸ.ನಂ.66ರಲ್ಲಿ 15 ಗುಂಟೆ ಖರಾಬು ಜಮೀನನ್ನು ಕಾಂಗ್ರೆಸ್ ಕಚೇರಿ ಕಟ್ಟಡ ನಿರ್ಮಾಣಕ್ಕಾಗಿ ಕಾಂಗ್ರೆಸ್ ಭವನ ಟ್ರಸ್ಟ್ ಇವರಿಗೆ ಗುತ್ತಿಗೆ ನೀಡಲು ನಿರ್ಧಾರ.
- ಚಿಕ್ಕಮಗಳೂರು ಜಿಲ್ಲೆ, ನರಸಿಂಹರಾಜಪುರ ಪಟ್ಟಣದ ರಸ್ತೆಯನ್ನು ರೂ.60.00 ಕೋಟಿಗಳ ಅಂದಾಜು ಮೊತ್ತದಲ್ಲಿ ಅಗಲೀಕರಣ.
- ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಭೂಸ್ವಾಧೀನಪಡಿಸಿಕೊಂಡಿದ್ದ ಜಮೀನಗಳನ್ನು ಭೂಸ್ವಾಧೀನ ಕಾಯ್ದೆ 1894ರ ಕಲಂ48(1)ರಡಿ ಭೂಸ್ವಾಧೀನದಿಂದ ಕೈಬಿಟ್ಟಿರುವ 29 ಪ್ರಕರಣಗಳಲ್ಲಿ, ಸಂಬಂಧಪಟ್ಟ ಎಲ್ಲಾ ಬಾಧಿತ ವ್ಯಕ್ತಿಗಳಿಗೆ ನೋಟೀಸ್ ನೀಡಿ, ವಿವರಣೆ ಪಡೆದು, ನಿಯಮಬಾಹಿರವಾಗಿ ಭೂಸ್ವಾಧೀನದಿಂದ ಕೈಬಿಟ್ಟಿರುವ ಅಧಿಸೂಚನೆಗಳನ್ನು ಹಿಂಪಡೆಯಲು ಹಾಗೂ ಇದಕ್ಕೆ ಕಾರಣಕರ್ತರಾಗಿರುವ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸಚಿವ ಸಂಪುಟ ನಿರ್ಧರಿಸಿದೆ.

## ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ: ದಿನೇಶ್ ಗುಂಡೂರಾವ್

**ಬೆಂಗಳೂರು,ಜು.17:**

ಧರ್ಮಸ್ಥಳ ರಹಸ್ಯ ಅಂತ್ಯಸಂಸ್ಕಾರ ಪ್ರಕರಣ ಸಂಬಂಧ ರಾಜ್ಯ ಸರ್ಕಾರ ಯಾರನ್ನೂ ರಕ್ಷಿಸುತ್ತಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಗುರುವಾರ ಹೇಳಿದರು.

ಧರ್ಮಸ್ಥಳದ ಮಾಜಿ ನೈರ್ಮಲ್ಯ ಸಿಬ್ಬಂದಿಯೊಬ್ಬರು ತಾವು ಧರ್ಮಸ್ಥಳದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಲವು ಮೃತದೇಹಗಳನ್ನು ಹೂತಿರುವುದಾಗಿ ಹೇಳಿಕೆ ದಾಖಲಿಸಿದ ಬೆನ್ನಲ್ಲೇ ಇದೀಗ ನಾಪತ್ತೆ, ಅಸ್ವಾಭಾವಿಕ ಸಾವುಗಳು ಮತ್ತು ಲೈಂಗಿಕ ದೌರ್ಜನ್ಯಗಳ ಬಗ್ಗೆ ದೂರುಗಳು ದಾಖಲಾಗುತ್ತಿವೆ.

ಯಾರನ್ನೂ ಬೆಂಬಲಿಸುವ ಅಥವಾ ರಕ್ಷಿಸುವ ಪ್ರಶ್ನೆಯೇ ಇಲ್ಲ, ನಾವು ಪ್ರಕರಣವನ್ನು ಸಂವೇದನಾಶೀಲಗೊಳಿಸಲು ಬಯಸುವುದಿಲ್ಲ, ಆದರೆ ನಾವು ಖಂಡಿತವಾಗಿಯೂ ಸತ್ಯವನ್ನು ತಿಳಿಸಲು ಬಯಸುತ್ತೇವೆ. ಆರೋಪಿಗಳನ್ನು 'ರಕ್ಷಿಸಲಾಗುತ್ತಿದೆ' ಎಂಬ ಆರೋಪದ ಕುರಿತು ಮಾತನಾಡಿದ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಪುರಾವೆಗಳು ಹೊರಬಂದರೆ ಕಾನೂನಿನ ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

## ಎಸ್‌ಐಟಿ ರಚನೆಗೆ ನಿವೃತ್ತ ನ್ಯಾ. ಗೋಪಾಲಗೌಡ ಒತ್ತಾಯ

**ಬೆಂಗಳೂರು,ಜು.17:**

ಧರ್ಮಸ್ಥಳ ಕ್ಷೇತ್ರದಲ್ಲಿ ನಡೆದಿದೆ ಎನ್ನಲಾದ ಅಪಾರ ಸಂಖ್ಯೆಯ ಅತ್ಯಾಚಾರ, ಕೊಲೆ ಮತ್ತು ಹೆಣಗಳನ್ನು ಹೂಳಿರುವ ಪ್ರಕರಣದಲ್ಲಿ ಸಾಕ್ಷಿ ಫಿರ್ಯಾದಿಗೆ ರಾಜ್ಯ ಸರ್ಕಾರವು ತಕ್ಷಣವೇ ಭದ್ರತೆ ಒದಗಿಸಬೇಕು. ಆರೋಪಗಳ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಬೇಕು ಎಂದು ನಿವೃತ್ತ ನ್ಯಾಯಮೂರ್ತಿ ಗೋಪಾಲಗೌಡ ಒತ್ತಾಯಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ಹೇಳಿಕೆ ದಾಖಲಿಸಿದ ನಂತರವ, ತನಿಖೆ ಸರಿಯಾಗಿ ಆಗುತ್ತಿಲ್ಲ. ಶವಗಳನ್ನು ಎಲ್ಲಿ ಹೂಳಲಾಗಿದೆ ಎಂಬುದನ್ನು ಕಾಲಿ ಹಾಳೆಯಲ್ಲಿ ಗುರುತು ಮಾಡಿಕೊಡು ಎಂದು ಪೊಲೀಸರು ಸಾಕ್ಷಿ ಫಿರ್ಯಾದಿಯ ಮೇಲೆ ಒತ್ತಡ ಹೇರುತ್ತಿದ್ದಾರೆ. ಆತ ನೀಡಿರುವ ಹೇಳಿಕೆಗಳು ಸೋರಿಕೆಯಾಗುತ್ತಿವೆ ಎಂದರು.

ಸಾಕ್ಷಿ ಫಿರ್ಯಾದಿಯು ತನ್ನ ವಕೀಲರೊಂದಿಗೆ ಒಂದು ಸ್ಥಳಕ್ಕೆ ತೆರಳಿ, ಕಳೇಬರವನ್ನು ತೆಗೆಯುವುದಾಗಿ ನ್ಯಾಯಾಲಯ ಮತ್ತು ಪೊಲೀಸರಿಗೆ ಮಾಹಿತಿ ನೀಡಿರುತ್ತಾರೆ. ಹೀಗಿದ್ದೂ ಪೊಲೀಸರು ಸ್ಥಳಕ್ಕೆ ತೆರಳಿಲ್ಲ. ಆತನ ಹೇಳಿಕೆ ದಾಖಲಿಸುವ ತನಿಖಾಧಿಕಾರಿಯು ಯಾರಿಗೋ ಕರೆ ಮಾಡಿ, ಅವರ ಸೂಚಿಸಿದ್ದಂತೆ ಪ್ರಶ್ನೆಗಳನ್ನು ಕೇಳುತ್ತಿದ್ದಾರೆ. ಹೀಗಾಗಿ ತಕ್ಷಣವೇ ತನಿಖಾ ತಂಡವನ್ನು ಬದಲಿಸಬೇಕು. ಹೈ ಅಥವಾ ಸುಪ್ರೀಂ ಕೋರ್ಟ್‌ನ ಹಾಲಿ ಅಥವಾ ನಿವೃತ್ತ ನ್ಯಾಯ ಮೂರ್ತಿಯ ಮೇಲ್ವಿಚಾರಣೆಯಲ್ಲಿ ಎಸ್‌ಐಟಿ ರಚಿಸಬೇಕು ಎಂದು ಒತ್ತಾಯಿಸಿದರು.

## ಹೊಸ ಪಕ್ಷ ಸ್ಥಾಪನೆ

**ಬೆಂಗಳೂರು,ಜು.17:**

ಬಿ.ವೈ. ವಿಜಯೇಂದ್ರ ಅವರು ಬಿಜೆಪಿ ರಾಜ್ಯಾಧ್ಯಕ್ಷರಾದರೆ ನಾವು ಹೊಸ ಪಕ್ಷ ಸ್ಥಾಪನೆ ಮಾಡುತ್ತೇವೆ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೊಸ ಬಾಂಬ್ ಸಿಡಿಸಿದ್ದಾರೆ.

ಗುರುವಾರ ಮಾತನಾ ಡಿದ ಅವರು, ಹೊಸ ಪಕ್ಷ ಕಟ್ಟುವುದರಲ್ಲಿ ಯಾವುದೇ ಸಂಶಯ ಬೇಡ. ಹಿಂದುತ್ವ ಮತ್ತು ಅಭಿವೃದ್ಧಿ ಆಧಾರದ ಮೇಲೆ ಹೊಸ ಪಕ್ಷ ಕಟ್ಟುತ್ತೇವೆ. ನಮ್ಮ ಹೊಸ ಪಕ್ಷಕ್ಕೆ ಕಾಂಗ್ರೆಸ್, ಬಿಜೆಪಿ ಎರಡೂ ಪಕ್ಷಗಳಿಂದ ಬರ್ತಾರೆ. ಮುಂದೆ ರಾಜ್ಯದಲ್ಲಿ ಆಡಳಿತ ಮಾಡ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬದಲಾವಣೆ ಚರ್ಚೆ ಕಮಲ ಪಾಳಯದಲ್ಲಿ ತೀವ್ರ ಗೊಂಡಿದೆ. ಈ ನಡುವೆ ಯಾವುದೇ ಕಾರಣಕ್ಕೂ ವಿಜಯೇಂದ್ರ ಅವರನ್ನು ಒಪ್ಪಲ್ಲ ಎಂದು ರೆಬೆಲ್ಸ್ ಪಟ್ಟು ಹಿಡಿದಿದ್ದಾರೆ.




## ನಿರಂತರ ಮಳೆ: ಶಾಲೆಗಳಿಗೆ ರಜೆ ಘೋಷಣೆ

**ಕಾರವಾರ,ಜು.17:**

ಕರ್ನಾಟಕದ ದಕ್ಷಿಣ ಒಳನಾಡಿನಲ್ಲಿ ಮಳೆ ಅಬ್ಬರ ಮುಂವರೆದ ಪರಿಣಾಮ ಕೊಡಗು, ಉತ್ತರ ಕನ್ನಡದಲ್ಲಿ ಶಾಲೆಗಳಿಗೆ ರಜೆ ಘೋಷಣೆ ಮಾಡಲಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಕರಾವಳಿಯಲ್ಲಿ ಮಳೆ ಅಬ್ಬರ ಜೋರಾಗಿರುವುದರಿಂದ ಮುನ್ನೆಚ್ಚರಿಕಾ ಕ್ರಮವಾಗಿ ಶಾಲೆಗಳಿಗೆ ರಜೆ ನೀಡಲಾಗಿದೆ. ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳ ತಾಲೂಕಿನ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಉತ್ತರ ಕನ್ನಡ ಜಿಲ್ಲಾಧಿಕಾರಿ ಲಕ್ಷೀಪ್ರಿಯಾ ರಜೆ ಘೋಷಣೆ ಮಾಡಿದ್ದಾರೆ.



**ವ್ಯಾಪಕ ಮಳೆ :**

ಬಂಗಾಳಕೊಲ್ಲಿ ಹಾಗೂ ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತ ಪರಿಣಾಮ ರಾಜ್ಯದಲ್ಲಿ 3 ದಿನ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಭಾರೀ ಮಳೆ ಹಿನ್ನೆಲೆ ಕರಾವಳಿ, ಒಳನಾಡು ಸೇರಿ 7 ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ಕರಾವಳಿಯ ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಬಿರುಗಾಳಿ ಸಹಿತ ಭಾರೀ ಮಳೆಯ ಎಚ್ಚರಿಕೆ ನೀಡಿದೆ.

ಜುಲೈ 22ರವರೆಗೂ ಮಳೆ ಸಾಧ್ಯತೆ

ಇನ್ನು ಗುರುವಾರ ಬೆಂಗಳೂರಿನಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಹಳದಿ ಎಚ್ಚರಿಕೆ ನೀಡಿದೆ. ಇದಲ್ಲದೆ, ಕರ್ನಾಟಕದ ಕೊಡಗು, ಮೈಸೂರು, ಶಿವಮೊಗ್ಗ, ಚಿಕ್ಕಮಗಳೂರು, ಚಿತ್ರದುರ್ಗ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಹವಾಮಾನ ಇಲಾಖೆ ಹಳದಿ ಎಚ್ಚರಿಕೆ ನೀಡಿದೆ.

## ನ್ಯಾಯಾಂಗ ನಿಂದನೆಗೆ ತಡೆ

**ಬೆಂಗಳೂರು,ಜು.17:**



ಕರ್ನಾಟಕದ ಗ್ರಾಮವೊಂದರಲ್ಲಿ ನಡೆದಿರುವ ಬೃಹತ್ ಪ್ರಮಾಣದ ಭೂ ಅತಿಕ್ರಮಣಕ್ಕೆ ಸಂಬಂಧಿಸಿದಂತೆ ನಡೆಯುತ್ತಿರುವ ನ್ಯಾಯಾಂಗ ನಿಂದನೆ ವಿಚಾರಣೆಯಲ್ಲಿ ಕೇಂದ್ರ ಸಚಿವ ಮತ್ತು ಜೆಡಿಎಸ್ ನಾಯಕ ಎಚ್ ಡಿ ಕುಮಾರಸ್ವಾಮಿ ಅವರ ವಿರುದ್ಧ ಕ್ರಮ ಜರುಗಿಸುವ ಆದೇಶಕ್ಕೆ ಸುಪ್ರೀಂ ಕೋರ್ಟ್ ಗುರುವಾರ ತಡೆ ನೀಡಿದೆ.

ಕರ್ನಾಟಕ ಹೈಕೋರ್ಟ್‌ನ ಏಪ್ರಿಲ್ 17 ರ ಆದೇಶದ ವಿರುದ್ಧ ಕೇಂದ್ರ ಭಾರೀ ಕೈಗಾರಿಕಾ ಸಚಿವ ಕುಮಾರಸ್ವಾಮಿ ಸಲ್ಲಿಸಿದ ಅರ್ಜಿಯನ್ನು ಗಮನಿಸಿದ ನ್ಯಾಯಮೂರ್ತಿಗಳಾದ ಪಂಕಜ್ ಮಿಥಲ್ ಮತ್ತು ಪ್ರಸನ್ನ ಬಿ ವರಾಳೆ ಅವರನ್ನೊಳಗೊಂಡ ಪೀಠ, ವಕೀಲ ಪ್ರಶಾಂತ್ ಭೂಷಣ್ ಪ್ರತಿನಿಧಿಸುತ್ತಿರುವ ಸಮಾಜ ಪರಿವರ್ತನ ಸಮುದಾಯ ಎಂಬ ಸರ್ಕಾರೇತರ ಸಂಸ್ಥೆಗೆ ನೋಟಿಸ್ ಜಾರಿ ಮಾಡಿದೆ.

## ಜಾಮೀನು ಏಕೆ ರದ್ದು ಮಾಡಬಾರದು

**ನವದೆಹಲಿ,ಜು.17:**

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎ2 ಆರೋಪಿಯಾಗಿರುವ ನಟ ದರ್ಶನ್‌ಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಜಾಮೀನಿನ ವಿರುದ್ಧ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ದರ್ಶನ್ ಪರ ವಕೀಲರಿಗೆ ಜಾಮೀನು ಯಾಕೆ ರದ್ದು ಮಾಡಬಾರದು ಎಂದು ಪ್ರಶ್ನಿಸಿ ಮುಂದಿನ ವಿಚಾರಣೆಯನ್ನು ಜುಲೈ 22ಕ್ಕೆ ಮುಂದೂಡಿದೆ. ಹೈಕೋರ್ಟ್ ತೀರ್ಪಿನ ಬಗ್ಗೆ ಪರಿಶೀಲಿಸಿರುವ ಸುಪ್ರೀಂ ಕೋರ್ಟ್ ಬದಲಾವಣೆಯ ಬಗ್ಗೆ ಪರೋಕ್ಷವಾಗಿ ತನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದು ಜುಲೈ 22ರಂದೇ ಅಂತಿಮ ವಿಚಾರಣೆ ನಡೆಸಿ ಅಂದೇ ಆದೇಶ ನೀಡುವುದಾಗಿ ಹೇಳಿದೆ.



## ಸಂಭ್ರಮದ ಚಾಮುಂಡೇಶ್ವರಿ ವರ್ಧಂತಿ ಮಹೋತ್ಸವ

**ಮೈಸೂರು,ಜು.17:**

ಶಕ್ತಿದೇವತೆ ಚಾಮುಂಡೇಶ್ವರಿಯ ವರ್ಧಂತಿ ಮಹೋತ್ಸವವು ಚಾಮುಂಡಿ ಬೆಟ್ಟದಲ್ಲಿ ಗುರುವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ನೆರವೇರಿತು.

ಚಿನ್ನದ ಪಲ್ಲಕ್ಕಿಯಲ್ಲಿ ದೇವಿಯ ಮೂರ್ತಿಯನ್ನು ಇರಿಸಿ ದೇಗುಲದ ಸುತ್ತ ಮೆರವಣಿಗೆ ಮಾಡಲಾಯಿತು. ಅಪಾರ ಸಂಖ್ಯೆಯ ಭಕ್ತರು 'ಜೈ ದುರ್ಗೆ, ಜೈ ಚಾಮುಂಡೇಶ್ವರಿ' ಎಂಬ ಘೋಷಣೆ ಕೂಗುತ್ತ ಸಂಭ್ರಮಿಸಿದರು.

ಅರಮನೆ ಪೊಲೀಸ್ ಬ್ಯಾಂಡ್ ಜೊತೆಗೆ ಮಂಗಳವಾದ್ಯ, ಛತ್ರಿ, ಚಾಮರಗಳೊಂದಿಗೆ ಮೆರವಣಿಗೆ ಮುಂದುವರಿಯಿತು. ಆಷಾಢ ಮಾಸದ ಕೊನೆಯ ವಾರದಲ್ಲಿ ಪ್ರತಿ ವರ್ಷ ನಡೆಯುವ ಈ ಉತ್ಸವಕ್ಕೆ ಭಕ್ತರ ದಂಡು ಹರಿದು ಬಂದಿತ್ತು.

## ನಗದು ಪ್ರಶಸ್ತಿ ಮಂಜೂರಾತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ,ಜು.17:**

ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ಸಾರ್ವತ್ರಿಕ ಪರೀಕ್ಷೆಗಳಲ್ಲಿ ಗರಿಷ್ಠ ಅಂಕ ಪಡೆದ ಕರ್ನಾಟಕದ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗಾಗಿ ಜನರಲ್ ಕೆ.ಎಸ್.ತಿಮ್ಮಯ್ಯ ನಗದು ಪ್ರಶಸ್ತಿ ಮಂಜೂರಾತಿಗಾಗಿ ಮತ್ತು ಒಂದನೇ ತರಗತಿಯಿಂದ ಅಂತಿಮ ವರ್ಷದ ಪದವಿ, ಡಿಪ್ಲೊ?ಲೀಮಾ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕದ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಮಾಜಿ ಸೈನಿಕರು ಅರ್ಜಿಗಳನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಛೇರಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ನವಂಬರ್ 30 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08182-220925 ನ್ನು ಸಂಪರ್ಕಿಸಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರು (ಪ್ರಭಾರ), ಸಿ.ಎ ಹಿರೇಮಠ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ,ಜು.17:**

ಪ್ರಸಕ್ತ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಆನ್‌ಲೈನ್ ವೆಬ್ ಸೈಟ್ http://shp.karnataka.gov.in ಮೂಲಕ ಆಗಸ್ಟ್ 14 ರೊಳಗಾಗಿ ಸಲ್ಲಿಸಬೇಕು. ಇಲಾಖೆಯ ಮಾಹಿತಿಗಾಗಿ www:bcwd.karnataka.gov.in ವೀಕ್ಷಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:8050770004, 080-35254757 ಸಂಪರ್ಕಿಸಬಹುದೆಂದು ಇಲಾಖೆ ಅಧಿಕಾರಿ ತಿಳಿಸಿದ್ದಾರೆ.

## ದೊಡ್ಡ ಮರಗಳ ಕಡಿತಕ್ಕೆ ಪರಿಸರ ಪ್ರೇಮಿಗಳ ಆಕ್ರೋಶ

**ದಾವಣಗೆರೆ,ಜು.17:**

ನಗರದ ದೇವರಾಜ್ ಅರಸ್ ಬಡಾವಣೆಯ ಎ ಬ್ಲಾಕ್ ನಲ್ಲಿ ಪಾರ್ಕ್ ಅಭಿವೃದ್ಧಿಗೆ ಕೇವಲ ಜಾಲಿ ಮರ ತೆಗೆಯಲು ಕಡಿಯಲು ಅರಣ್ಯ ಇಲಾಖೆ ಅನುಮತಿ ನೀಡಿತ್ತು. ಆದ್ರೆ, ಆದರೆ ಅನುಮತಿ ಪಡೆದ ಮರದ ಜೊತೆ ದೊಡ್ಡದಾಗಿ ಬೆಳೆದ ಮರಗಳನ್ನು ಕಡಿಯಲು ಹೇಳಿದವರು ಯಾರು ಎಂದು ಪರಿಸರ ಪ್ರೇಮಿಗಳು ಪ್ರಶ್ನಿಸಿದ್ದಾರೆ.

ಈ ಬಗ್ಗೆ ಬಳ್ಳಾರಿಯ ಅರಣ್ಯ ಇಲಾಖೆಯ ವಿಜಿಲೆಯನ್ಸಿ ಅವರಿಗೆ ದೂರು ನೀಡುವುದಾಗಿ ಎಚ್ಚರಿಕೆ ನೀಡಿದ್ದಾರೆ. ಈ ಭಾಗದ ಯುವ ವಕೀಲರು ಹೋಗಿ ಕೇಳಿದರೂ ಸಮಂಜಸ ಉತ್ತರ ನೀಡದೇ ಮರ ಕಡಿದವರು ಮರ ಕಡಿಯಲು ದೇವಸ್ಥಾನ ಕಮಿಟಿಯವರು ಹೇಳಿದ್ದಾರೆ ಎಂಬ ಉಡಾಫೆ ಉತ್ತರ ಕೊಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ.

ದಾವಣಗೆರೆ ಜಿಲ್ಲಾಧಿಕಾರಿಗಳು ಹಾಗೂ ಪಾಲಿಕೆ ಆಯುಕ್ತರು ಕೂಡಲೇ ಈ ಬಗ್ಗೆ ಕ್ರಮ ವಹಿಸಬೇಕೆಂದು ಆಗ್ರಹಿಸಿದ್ದಾರೆ. ಪರಿಸರ ರಕ್ಷಣೆ ನಮ್ಮ ಹೊಣೆ ಎಂಬುದು ಎಲ್ಲಾ ನಾಗರೀಕರ ಕರ್ತವ್ಯವಾಗಿದೆ. ಪಕ್ಷಿ ಸಂಕುಲದ ಉಳಿವಿಗೆ ಮರ ಗಿಡದ ಅವಶ್ಯಕತೆ ಅಗತ್ಯ ಎಂಬುದನ್ನು ಎಲ್ಲರೂ ಸಹ ಪಾಲಿಸಬೇಕು. ಮರ ಕಡಿಯಲು ಯಾರು ಹೇಳಿದ್ದು ಎಂಬ ಕುರಿತಂತೆ ಸಮಗ್ರ ತನಿಖೆಯಾಗಬೇಕು ಎಂದು ಪರಿಸರ ಪ್ರೇಮಿಗಳು ಆಗ್ರಹಿಸಿದ್ದಾರೆ.

## ಆಕ್ಷೇಪಣೆಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ,ಜು.17:**

ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮದಡಿಯಲ್ಲಿ ವಿವಿಧ ಹುದ್ದೆಗಳಿಗೆ ಜುಲೈ 8 ರಂದು ನಡೆಸಿದ ನೇರ ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಪ್ರಕಟಣಾ ಫಲಕದಲ್ಲಿ ಜುಲೈ 17 ರಂದು ಪ್ರಕಟಿಸಲಾಗಿರುತ್ತದೆ. ಆಯ್ಕೆ ಪಟ್ಟಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಮರ್ಥನಿಯ ಮುಖ್ಯ ದಾಖಲೆಗಳ ಜೊತೆಗೆ ಲಿಖಿತ ಆಕ್ಷೇಪಣೆಗಳನ್ನು ಪ್ರಕಟಗೊಂಡ 7 ದಿನಗಳೊಳಗೆ ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿಗಳ ಕಚೇರಿಗೆ ಸಲ್ಲಿಸಲು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

## ಮಹಿಳಾ ಸ್ವ ಸಹಾಯ ಗುಂಪುಗಳಿಂದ ಅರ್ಜಿ ಆಹ್ವಾನ

**ದಾವಣಗೆರೆ,ಜು.17:**

ಸ್ವಚ್ಛ ಭಾರತ ಮಿಷನ್ -2.0 ಯೋಜನೆಯ ವಿವಿಧ ಘಟಕಗಳಾದ ಘನತ್ಯಾಜ್ಯ, ಪಾರಂಪರಿಕ ತ್ಯಾಜ್ಯ, ಸಿ ಮತ್ತು ಡಿ ತ್ಯಾಜ್ಯ ನಿರ್ವಹಣೆ, ಸ್ವಚ್ಛ -ಸರ್ವೇಕ್ಷಣ ನಗರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ಓಡಿಎಫ್, ಸ್ಟಾರ್ ರೇಟಿಂಗ್ ಮತ್ತು ಇತರೆ ವಿಷಯಗಳ ಕುರಿತು ಮನೆ ಮನೆಗೂ ಭೇಟಿ ನೀಡಿ ನೇರವಾಗಿ ಮಾತನಾಡುವುದರ ಮೂಲಕ ಐ.ಇ.ಸಿ ಚಟುವಟಿಕೆಗಳನ್ನು ನಿರ್ವಹಿಸಲು ಅರ್ಹ ಮಹಿಳಾ ಸ್ವ ಸಹಾಯ ಗುಂಪುಗಳಿಂದ 8 ಸದಸ್ಯರುಗಳನ್ನು ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಮಹಿಳಾ ಅಭ್ಯರ್ಥಿಗಳು ತಮ್ಮ ಎಲ್ಲ ಅಗತ್ಯ ದಾಖಲಾತಿಯೊಂದಿಗೆ ಜುಲೈ 22 ರ ಕಚೇರಿ ಅವಧಿಯೊಳಗಾಗಿ ನಿಗಧಿತ ಅರ್ಜಿ ನಮೂನೆಯನ್ನು ಕಚೇರಿಯಿಂದ ಪಡೆದು ಪೌರಾಯುಕ್ತರು ನಗರಸಭೆ, ಹರಿಹರ ವಿಳಾಸಕ್ಕೆ ದ್ವಿ ಪ್ರತಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆರೋಗ್ಯ ಶಾಖೆಯನ್ನು ಸಂಪರ್ಕಿಸಲು ನಗರಸಭೆ ಪೌರಯುಕ್ತರು ತಿಳಿಸಿದ್ದಾರೆ.

## ಕಾಣೆಯಾಗಿದ್ದಾರೆ

**ದಾವಣಗೆರೆ,ಜು.17:**

ಹದಡಿ ಪೊಲೀಸ್ ಠಾಣಾ ವ್ಯಾಪ್ತಿಯ ಮಳಲಕೆರೆ ಗ್ರಾಮ ವಾಸಿ ಚಂದ್ರಪ್ಪ ಎಂಬ 33 ವರ್ಷದ ವ್ಯಕ್ತಿ ಕಾಣೆಯಾಗಿದ್ದು, ಚಹರೆ 6 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ದುಂಡುಮುಖ ಹೊಂದಿರುತ್ತಾರೆ.

ಈ ವ್ಯಕ್ತಿಯ ಸುಳಿವು ದೊರೆತಲ್ಲಿ ಹದಡಿ ಪೊಲೀಸ್ ಠಾಣೆ ದೂ.ಸಂ:08192-253100, 9480803254, 9480803232, 9480803222 ಗೆ ಮಾಹಿತಿ ನೀಡುವಂತೆ ಪೊಲೀಸ್ ಪ್ರಕಟಣೆ ತಿಳಿಸಿದೆ.

## ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ,ಜು.17:**

ಪ್ರಸಕ್ತ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ (ಪಿ.ಯು.ಸಿ ಹಾಗೂ ಸಮನಾಂತರ ಕೋರ್ಸು ಮತ್ತು ಪದವಿ ಮಟ್ಟದ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶದ https://shp.karnataka.gov.in ನಲ್ಲಿ ಅರ್ಜಿಗಳನ್ನು ಆಗಸ್ಟ್ 2 ರೊಳಗಾಗಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ 08192-250022 ಹಾಗೂ ತಾಲ್ಲೂಕು ವಿಸ್ತರಣಾಧಿಕಾರಿಗಳ ದೂ.ಸಂ : 08192-250066 ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ಪ್ರಾಥಮಿಕ ಆರೋಗ್ಯಕ್ಕೆ ಕೇಂದ್ರಕ್ಕೆ ಮೂಲಭೂತ ಸೌಕರ್ಯ




**ದಾವಣಗೆರೆ,ಜು.17:**

ಕೇಂದ್ರ ಮಹಾರತ್ನ ಕಂಪನಿ ಪವರ್‌ಗ್ರಿಡ್‌ನ ಸಿಎಸ್‌ಆರ್ ನಿಧಿಯಡಿ ದಾವಣಗೆರೆ ಜಿಲ್ಲೆಯ ಬಸವಾಪಟ್ಟಣ ಮತ್ತು ತ್ಯಾವಣಿಗಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರೂ.95.64 ಲಕ್ಷದಲ್ಲಿ ವಿವಿಧ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ಅವರಿಗೆ ಕಂಪನಿ ಅಧಿಕಾರಿಗಳು ಹಸ್ತಾಂತರಿಸಿದರು.

ಪವರ್‌ಗ್ರಿಡ್ ಸಿ.ಎಸ್.ಆರ್. ನಿಧಿಯಡಿ ಜಿಲ್ಲೆಗೆ 2023-24ನೇ ಸಾಲಿನಿಂದ ಇಲ್ಲಿಯವರೆಗೆ ರೂ.12.12 ಕೋಟಿ ಅನುದಾನ ನೀಡಲಾಗಿದೆ. ಇನ್ನೂ ಹೆಚ್ಚಿನ ಅನುದಾನವನ್ನು ಜಿಲ್ಲೆಗೆ ನೀಡಲು ಜಿಲ್ಲಾಧಿಕಾರಿ ಅವರು ಕಂಪನಿ ಅಧಿಕಾರಿಗಳಿಗೆ ಮನವಿ ಮಾಡಿದರು.

ಸಿಆರ್‌ಸಿ ಸಂಯುಕ್ತ ಪ್ರಾದೇಶಿಕ ಕೌಶಲ್ಯ ಅಭಿವೃದ್ಧಿ ಮತ್ತು ಪುನರ್ವಸತಿ ಮತ್ತು ದಿವ್ಯಾಂಗ ಜನರ ಸ್ವಾವಲಂಬಿ ಕೇಂದ್ರಕ್ಕೆ ಹೆಚ್ಚಿನ ನೆರವು ನೀಡಲು ಮನವಿ ಮಾಡಿ ರಾಜ್ಯದಲ್ಲಿಯೇ ಇದು ಮೂರನೇ ಕೇಂದ್ರವಾಗಿದೆ. ಇಲ್ಲಿ ಎಲ್ಲಾ ತರಹದ ದಿವ್ಯಾಂಗ ಜನರಿಗೆ ಚಿಕಿತ್ಸೆ ನೀಡಲಾಗುತ್ತಿದ್ದು ಅತ್ಯುತ್ತಮ ಕೆಲಸವನ್ನು ಕೇಂದ್ರ ಮಾಡುತ್ತಿದೆ. ಕೇಂದ್ರದಲ್ಲಿ ಈಗಾಗಲೇ ಒಂದು ವಾಹನವಿದೆ. ಸುತ್ತಮುತ್ತಲಿನ 15 ಕಿ.ಮೀ. ವ್ಯಾಪ್ತಿಯಲ್ಲಿ ವಾಹನ ಸಂಚರಿಸಬೇಕಾಗಿರುವುದರಿಂದ ಹೆಚ್ಚುವರಿ ವಾಹನದ ಅವಶ್ಯಕತೆ ಇದ್ದು ಸಿಎಸ್‌ಆರ್ ನಿಧಿಯಲ್ಲಿ ನೀಡಲು ಮನವಿ ಮಾಡಿದಾಗ ಪವರ್‌ಗ್ರಿಡ್ ಅಧಿಕಾರಿಗಳು ಪರಿಶೀಲಿಸಿ ಒದಗಿಸಲು ಕ್ರಮ ಜರುಗಿಸಲಾಗುತ್ತದೆ ಎಂದರು.

ಬಸವಾಪಟ್ಟಣ ಮತ್ತು ತ್ಯಾವಣಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ರೂ.95.64 ಲಕ್ಷಗಳಲ್ಲಿ ಸ್ವಯಂ ಚಾಲಿತ ವಾಟರ್ ಪ್ಯೂರಿಫೈಯರ್, ಸೋಲಾರ್ ದೀಪ ಅಳವಡಿಕೆ, 3 ಕೆವಿ ಸೋಲಾರ್ ವಿದ್ಯುತ್, ನೀರು ಪೂರೈಕೆ, ಬಣ್ಣ, ಟೈಲ್ಸ್, ಬಾಗಿಲು ಅಳವಡಿಕೆ ಸೇರಿದಂತೆ ಚಿಕಿತ್ಸೆಗೆ ಆಗಮಿಸುವವರಿಗೆ ಕುಳಿತುಕೊಳ್ಳಲು ಕುರ್ಚಿ ಅಳವಡಿಕೆ ಸೇರಿದಂತೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ.

ಈ ವೇಳೆ ಪವರ್‌ಗ್ರಿಡ್‌ನ ಮುಖ್ಯ ಜನರಲ್ ಮ್ಯಾನೇಜರ್ ಎಂ.ಎಸ್.ಹಜೀಬ್, ಹಿರಿಯೂರು ಕೇಂದ್ರದ ಉಪ ವ್ಯವಸ್ಥಾಪಕ ಪಿ. ರವಿಚಾಂದ್, ಆರ್.ಸಿ.ಹೆಚ್.ಅಧಿಕಾರಿ ಡಾ. ಮರುಳಾರಾಧ್ಯ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಗಾಂಜಾ ಮಿಶ್ರಿತ ಚಾಕಲೇಟ್ ಮಾರಾಟ: ಬಂಧನ

**ದಾವಣಗೆರೆ,ಜು.17:**

ದಾವಣಗೆರೆ ಜಿಲ್ಲೆಯ ಮಾದಕ ದ್ರವ್ಯ ನಿಗ್ರಹ ಪಡೆ ಪೊಲೀಸರು ಕಾರ್ಯಾಚರಣೆ ನಡೆಸಿದ್ದು, ಗಾಂಜಾ, ಗಾಂಜಾ ಮಿಶ್ರಿತ ಚಾಕಲೇಟ್ ಅನ್ನು ಅಕ್ರಮವಾಗಿ ಮಾರಾಟ ಮಾಡುತ್ತಿದ್ದವರನ್ನು ಪತ್ತೆ ಹಚ್ಚಿ ಸೆರೆ ಹಿಡಿದಿದೆ.

ದಾವಣಗೆರೆ ಎಸ್ಪಿ ಉಮಾ ಪ್ರಶಾಂತ್ ಅವರು ದಾವಣಗೆರೆ ನಗರ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ಶರಣ ಬಸವೇಶ್ವರ ಬಿ ನೇತೃತ್ವದಲ್ಲಿ ದಾವಣಗೆರೆ ಜಿಲ್ಲೆಯಲ್ಲಿ ಮಾದಕ ದ್ರವ್ಯಗಳ ನಿಗ್ರಹ ಮಾಡುವ ಉದ್ದೇಶದಿಂದ ಪಿ ಎಸ್ ಐ ಸಾಗರ ಅತ್ತರವಾಲ್ ಹಾಗೂ ಸಿಬ್ಬಂದಿರವರನ್ನು ಒಳಗೊಂಡ ವಿಶೇಷ ತಂಡ ರಚಿಸಿದ್ದರು.

ಈ ತಂಡವು ಬಡಾವಣೆ ಪೊಲೀಸ್ ಠಾಣಾ ಸರಹದ್ದಿನ ರಾಂ ಅಂಡ್ ಕೋ ಸರ್ಕಲ್ ಬಳಿ ಇರುವ ರಾಜು ಪಾನ್ ಶಾಪ್ ರವರ ಮನೆಯಲ್ಲಿ ಅಕ್ರಮವಾಗಿ ಗಾಂಜಾ ಇಟ್ಟುಕೊಂಡು ಮಾರಾಟ ಮಾಡುತ್ತಾರೆ ಅಂತ ಖಚಿತ ಮಾಹಿತಿ ಬಂದ ಮೇರೆಗೆ ಮಾದಕ ದ್ರವ್ಯ ನಿಗ್ರಹ ಪಡೆ ಅಧಿಕಾರಿ ಸಿಬ್ಬಂದಿಗಳ ತಂಡ ಹಾಗೂ ಬಡಾವಣೆ ಪೊಲೀಸ್ ಠಾಣೆಯ ಪಿಎಸ್‌ಐ ಮಾಳವ್ವ ಮತ್ತು ಸಿಬ್ಬಂದಿಗಳೊಂದಿಗೆ ದಾಳಿ ನಡೆಸಲಾಯಿತು.

ರಾಂ, ಕೋ ಸರ್ಕಲ್ ನಲ್ಲಿರುವ ರಾಜು ಪಾನ್ ಶಾಪ್ ನಡೆಸುತ್ತಿದ್ದ ಮನೆಯ ಮೇಲೆ ದಾಳಿ ಮಾಡಿ ಪರಿಶೀಲನೆ ಮಾಡಲಾಯಿತು. ಈ ವೇಳೆ ರಾಜು ಪಾನ್ ಶಾಪ್ ನವರ ಮನೆಯಲ್ಲಿ ಒಟ್ಟು 1115 ಗ್ರಾಂ ತೂಕದ ಗಾಂಜಾ ಹಾಗು ಮೋಲ್ ಅಂತ ಹಿಂದಿ ಭಾಷೆಯಲ್ಲಿ ಇರುವ ಗಾಂಜಾ ಮಿಶ್ರಿತ 160 ಚಾಕಲೇಟ್‌ಗಳು ಸಿಕ್ಕಿದ್ದು, ನಂತರ ಪಂಚರ ಸಮಕ್ಷಮ ಗಾಂಜಾವನ್ನು ಹಾಗೂ ಗಾಂಜಾ ಮಿಶ್ರಿತ ಚಾಕಲೇಟ್ ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಪ್ಯಾರೆಲಾಲ್ ಅಲಿಯಾಸ್ ರಾಜು, ಕಾನೂನು ಸಂಘರ್ಷಕ್ಕೊಳಗಾದ ಬಾಲಕನನ್ನು ವಶಕ್ಕೆ ಪಡೆದು ಬಡಾವಣೆ ಠಾಣೆ ಗನ್ನೆ ನಂ:146/2025 ಕಲಂ NDPS ACT, 1985 (U/s- 8(c),20(ii)(B),25) ರೀತ್ಯ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.

ಪ್ರಕರಣದ ಆರೋಪಿತರಾದ ಪ್ಯಾರೆಲಾಲ್ ಅಲಿಯಾಸ್ ರಾಜು (38) ಬೀಡಾ ವ್ಯಾಪಾರಿ. ರಾಂ ಅಂಡ್ ಕೋ ಸರ್ಕಲ್ ನ ಮುದೇಗೌಡ್ರು ಕಾಂಪ್ಲೆಕ್ಸ್‌ನಲ್ಲಿ ವಾಸವಿದ್ದ. ಕಾನೂನು ಸಂಘರ್ಷಕ್ಕೊಳಗಾದ ಬಾಲಕನನ್ನು ಕೂಲಂಕುಷವಾಗಿ ವಿಚಾರ ಮಾಡಲಾಗಿ ಗಾಂಜಾವನ್ನು ಹಾಗು ಗಾಂಜಾ ಮಿಶ್ರಿತ ಚಾಕಲೇಟ್ ಗಳನ್ನು ಬೇರೆ ಎಲ್ಲಿಯೋ ಖರೀದಿ ಮಾಡಿಕೊಂಡು ಬಂದು ದಾವಣಗೆರೆ ನಗರದ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಇತರರಿಗೆ ಮಾರಾಟ ಮಾಡಿ ಹಣ ಸಂಪಾದನೆ ಮಾಡುತ್ತೀರುತ್ತೇವೆ ಅಂತ ಹೇಳಿಕೆ ನೀಡಿದ್ದಾರೆ.

ಆರೋಪಿತನಾದ ಪ್ಯಾರೆಲಾಲ್, ರಾಜು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಬಾಲಕನನ್ನು ಬಾಲ ನ್ಯಾಯಮಂಡಳಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

# 23 ವರ್ಷದಿಂದ ಬೇಕಾಗಿದ್ದ ಕಳ್ಳ ಸಿಕ್ಕಿಬಿದ್ದಿದ್ದೇ ರೋಚಕ

**ದಾವಣಗೆರೆ,ಜು.17:**

ಕಳೆದ 23 ವರ್ಷಗಳ ಹಿಂದೆ ವಿವಿಧ ಪ್ರಕರಣಗಳಲ್ಲಿ ಭಾಗಿಯಾಗಿ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಪತ್ತೆ ಹಚ್ಚುವಲ್ಲಿ ದಾವಣಗೆರೆ ಪೊಲೀಸರು ಯಶಸ್ವಿಯಾಗಿದ್ದು, ಈತನನ್ನು ಸೆರೆಹಿಡಿದಿದ್ದೇ ರೋಚಕ.

ಘಟನೆ ಹಿನ್ನೆಲೆ:

29-01-2002 ರಂದು ಬಡಾವಣೆ ಪೊಲೀಸ್ ಠಾಣಾ ಗುನ್ನೆ ನಂ. 215/2002 ಕಲಂ. 380 ಐಪಿಸಿ ಪ್ರಕರಣದ ಕಾಗದ ಪತ್ರಗಳನ್ನು ಕೃತ್ಯ ಸ್ಥಳದ ಆಧಾರದ ಮೇಲೆ ಕಳಿಸಿದ್ದನ್ನು ಸ್ವೀಕರಿಸಿ ಪರಿಶೀಲಿಸಲಾಗಿದೆ. ಆಗ ಶಿವಾಲಿ ಟಾಕೀಸ್ ಬಳಿ ಇರುವ ತ್ರಿನೇತ್ರ ವಿಸಿಡಿ ಅಂಡ್ ಕ್ಯಾಸೆಟ್ ಅಂಗಡಿಯಲ್ಲಿ ಸುಮಾರು 3000 ರೂ ಬೆಲೆ ಬಾಳುವ ವಿಸಿಡಿ ಪ್ಲೇಯರ್ ನ್ನು ಕಳವು ಮಾಡಿಕೊಂಡು ಹೋಗಿದ್ದರ ಮೇರೆಗೆ ಬಸವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಚಿಕ್ಕಮಗಳೂರು ಜಿಲ್ಲೆಯ ಡಾ. ರಾಜ್ ಕುಮಾರ್ ರಸ್ತೆಯ ಎರಡನೇ ಕ್ರಾಸ್ ನ ಬಸವನಹಳ್ಳಿ ಬಡಾವಣೆಯ ವಾಸಿಯಾಗಿದ್ದ ಪ್ರಕರಣದ ಆರೋಪಿ ರಾಜೇಶ್ ಕುಮಾರ್ ಯರಗುಂಟೆ ಗ್ರಾಮದಲ್ಲಿದ್ದ. ಪ್ರಕರಣ ದಾಖಲಾಗಿನಿಂದಲೂ ಘನ ನ್ಯಾಯಾಲಯಕ್ಕೆ ಹಾಜರಾಗದೇ ತಲೆಮರೆಸಿಕೊಂಡಿದ್ದು, ಘನ ನ್ಯಾಯಾಲಯವು ದಿ:-24-08-2004 ರಂದು ಎಲ್.ಪಿ.ಆರ್ ಪ್ರಕರಣ ಅಂತಾ ಆದೇಶಿಸಿತ್ತು.

ಆರೋಪಿತನ ಬಗ್ಗೆ ವಿವಿಧ ಕಡೆ ಮಾಹಿತಿಯನ್ನು ಸಂಗ್ರಹಿಸಿ, ಭಾತ್ಮಿದಾರರ ಖಚಿತ ಮಾಹಿತಿ ಮೇರೆಗೆ ಚಿಕ್ಕಮಗಳೂರು ಪಟ್ಟಣದಲ್ಲಿ ಆರೋಪಿತನಾದ ರಾಜೇಶ್ ಕುಮಾರ್ (47) ಪತ್ತೆ ಮಾಡಿ ಘನ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

ಪ್ರರಕಣದ ಆರೋಪಿತನ ಪತ್ತೆ ಕಾರ್ಯದಲ್ಲಿ ಭಾಗಿಯಾಗಿದ್ದ ಬಸವನಗರ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ನಂಜುಂಡಸ್ವಾಮಿ ಹಾಗೂ ಬಡಾವಣೆ ಪೊಲೀಸ್ ನಿರೀಕ್ಷಕಿ ಎಂ.ಆರ್ ಚೌಬೆ ರವರ ನೇತೃತ್ವದಲ್ಲಿ ಕಾರ್ಯಾಚರಣೆ ಕೈಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಎಸ್ಪಿ ಉಮಾ ಪ್ರಶಾಂತ್ ಅಭಿನಂದಿಸಿದ್ದಾರೆ.

# ದಾವಣಗೆರೆ ಪಾಲಿಕೆಗೆ ಮಿನಿಸ್ಟ್ರಿಯಲ್ ಅವಾರ್ಡ್ ಬಂದದ್ದು ಹೆಮ್ಮೆ ವಿಚಾರ: ಗಜೇಂದ್ರ, ಜಗನ್ನಾಥ



**ದಾವಣಗೆರೆ,ಜು.17:**

ಸ್ವಚ್ಛತೆ ಮತ್ತು ಘನತ್ಯಾಜ್ಯ ನಿರ್ವಹಣೆಯಲ್ಲಿ ದಾವಣಗೆರೆ ಮಹಾನಗರ ಪಾಲಿಕೆಯು ಸ್ವಚ್ಛ ಸರ್ವೇಕ್ಷಣೆ -2025ರ ಸಮೀಕ್ಷೆಯಲ್ಲಿ ರಾಷ್ಟ್ರಮಟ್ಟದಲ್ಲಿ ಸಚಿವಾಲಯ ಪ್ರಶಸ್ತಿ ಲಭಿಸಿರುವುದು ಸಂತಸದ ಸಂಗತಿ. ಇದಕ್ಕೆ ಕಾರಣೀಕರ್ತರಾದವರೆಲ್ಲರಿಗೂ ಅಭಿನಂದನೆ ಎಂದು ದಾವಣಗೆರೆ ಉತ್ತರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹಾಗೂ 28ಮತ್ತು 29ನೇ ವಾರ್ಡ್‌ನ ಪ್ರಬಲ ಆಕಾಂಕ್ಷಿಯಾಗಿರುವ ಗಜೇಂದ್ರ ಜಗನ್ನಾಥ ಹೇಳಿದ್ದಾರೆ.

ಈ ಕುರಿತಂತೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ, ಸಚಿವ ಎಸ್. ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಮಾರ್ಗದರ್ಶನದಲ್ಲಿ ಸ್ವಚ್ಛತಾ ಹಾಗೂ ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ ಕಾರ್ಯಗಳನ್ನು ಯಶಸ್ವಿಯಾಗಿ ಪಾಲಿಕೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಅನುಷ್ಠಾನಗೊಳಿಸಿದ್ದಾರೆ. ಈ ಕಾರಣದಿಂದ ಈ ಪ್ರಶಸ್ತಿ ಬಂದಿದ್ದು, ಇದು ದಾವಣಗೆರೆ ಜನರಿಗೆ ಖುಷಿಯ ಮತ್ತು ಹೆಮ್ಮೆಯ ವಿಚಾರ ಎಂದು ತಿಳಿಸಿದ್ದಾರೆ.

ಡಿಸಿ ಗಂಗಾಧರ ಸ್ವಾಮಿ, ಪಾಲಿಕೆ ಆಯುಕ್ತೆ ರೇಣುಕಾ, ಪೌರಕಾರ್ಮಿಕರು, ವಾಹನ ಚಾಲಕರು, ಕ್ಲೀನರ್ಸ್, ಲೋಡರ್ಸ್, ಹೆಲ್ತ್ ಇನ್ ಸ್ಪೆಕ್ಟರ್ಸ್, ನೈರ್ಮಲ್ಯ ಮೇಲ್ವಿಚಾರಕರು ಹಾಗೂ ಸ್ವಚ್ಛತಾ ಸಿಬ್ಬಂದಿ, ಮಹಾನಗರ ಪಾಲಿಕೆ ಅಧಿಕಾರಿಗಳು ಅಭಿನಂದನೆ ಹಾಗೂ ಧನ್ಯವಾದ ಎಲ್ಲರೂ ಸಲ್ಲಿಸಬೇಕು. ರಾಷ್ಟ್ರಮಟ್ಟದಲ್ಲಿಯೂ ಪಾಲಿಕೆಯು ಗುರುತಿಸಿಕೊಂಡಿರುವುದು ಜಿಲ್ಲೆಗೆ ಮಾತ್ರವಲ್ಲ, ರಾಜ್ಯಕ್ಕೆ ಗೌರವ ತರುವಂಥದ್ದಾಗಿದೆ ಎಂದು ಗಜೇಂದ್ರ ಜಗನ್ನಾಥ ತಿಳಿಸಿದ್ದಾರೆ.

# ಕರ್ನಾಟಕ ಬ್ಯಾಂಕ್ ನೌಕರರ ಸಂಘದ ಉಪಾಧ್ಯಕ್ಷರಾಗಿ ಹೆಚ್.ಎಸ್.ತಿಪ್ಪೇಸ್ವಾಮಿ



**ದಾವಣಗೆರೆ,ಜು.17:**

ಅಖಿಲ ಭಾರತ ಕರ್ನಾಟಕ ಬ್ಯಾಂಕ್ ನೌಕರರ ಸಂಘದ ಉಪಾಧ್ಯಕ್ಷರಾಗಿ ದಾವಣಗೆರೆಯ ಹೆಚ್.ಎಸ್.ತಿಪ್ಪೇಸ್ವಾಮಿ ಅವಿರೋಧವಾಗಿ ಆಯ್ಕೆಯಾದರು.

ಮಂಗಳೂರಿನಲ್ಲಿ ನಡೆದ ಸಂಘದ 26ನೇ ರಾಷ್ಟ್ರೀಯ ಸಮ್ಮೇಳನದಲ್ಲಿ ಮಂಗಳೂರಿನ ಬಿ.ಎಸ್.ಗಿರೀಶ್ ಅಧ್ಯಕ್ಷರಾಗಿ, ಕೆ.ಜಿ.ಪಣೀಂದ್ರ ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ಹೆಚ್.ಎಸ್.ತಿಪ್ಪೇಸ್ವಾಮಿ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೊಂಡರು. ಹೆಚ್.ಎಸ್. ತಿಪ್ಪೇಸ್ವಾಮಿಯವರು ದಾವಣಗೆರೆ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಕಾರ್ಯದರ್ಶಿಯಾಗಿಯೂ ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ದಾವಣಗೆರೆ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ರಾಘವೇಂದ್ರ ನಾಯರಿ ತಿಳಿಸಿದ್ದಾರೆ.

# ಜು.18 ರಿಂದ ಇಷ್ಟಲಿಂಗ ಮಹಾಪೂಜಾ ಹಾಗೂ ಜನಜಾಗೃತಿ ಧರ್ಮಸಮಾವೇಶ

**ದಾವಣಗೆರೆ,ಜು.17:**

ಬಾಳೆಹೊನ್ನೂರು ಶ್ರೀ ಮದ್ವೀರಶೈವ ಸದ್ಬೋಧನಾ ಸಂಸ್ಥೆ ಮತ್ತು ಜಿಲ್ಲಾ ಘಟಕದ ಸಹಯೋಗದಲ್ಲಿ ದಾವಣಗೆರೆಯಲ್ಲಿ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜಾ ಹಾಗೂ ಜನಜಾಗೃತಿ ಧರ್ಮಸಮಾವೇಶ ಕಾರ್ಯಕ್ರಮವು ಜುಲೈ 18ರಿಂದ 20ರವರೆಗೆ ನಗರದ ಶ್ರೀ ಅಭಿನವ ರೇಣುಕಾ ಮಂದಿರದಲ್ಲಿ ಜರುಗಲಿದೆ.

ಮೂರು ದಿನಗಳ ಕಾಲ ನಡೆಯುವ ಕಾರ್ಯಕ್ರಮದಲ್ಲಿ ಪ್ರತಿದಿನ ಬೆಳಿಗ್ಗೆ 8:30 ಕ್ಕೆ ಇಷ್ಟಲಿಂಗ ಪೂಜೆ ಜರಗಲಿದ್ದು, ಸಂಜೆ 6:30ಕ್ಕೆ ನಡೆಯುವ ಜನಜಾಗೃತಿ ಧರ್ಮಸಮಾವೇಶ ಕಾರ್ಯಕ್ರಮದಲ್ಲಿ ಬಾಳೆಹೊನ್ನೂರು ಪೀಠದ ಶ್ರೀ ಪ್ರಸನ್ನ ರೇಣುಕ ವೀರಸೋಮೇಶ್ವರ ಶಿವಾಚಾರ್ಯ ಶ್ರೀಗಳ ದಿವ್ಯ ಸಾನಿಧ್ಯ ಇರಲಿದೆ.

ಜುಲೈ 18ರಂದು ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ಗೌರವಾಧ್ಯಕ್ಷ ರೇಣುಕಾ ಶಿವಾಚಾರ್ಯ ಸ್ವಾಮಿಗಳ ನೇತೃತ್ವದಲ್ಲಿ ನಡೆಯುವ ಕಾರ್ಯಕ್ರಮವನ್ನು ಶಾಸಕ ಮತ್ತು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ಉದ್ಘಾಟಿಸಲಿದ್ದು, ನೆಗಳೂರು ಹಿರೇಮಠದ ಗುರು ಶಾಂತೇಶ್ವರ ಶಿವಾಚಾರ್ಯ ಶ್ರೀಗಳು ಉಪದೇಶಾಮೃತ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಅ.ಭಾ ಮಹಾಸಭಾ ಉಪಾಧ್ಯಕ್ಷ ಡಾ ಅಥಣಿ ವೀರಣ್ಣ, ಅಣಬೇರು ರಾಜಣ್ಣ, ಉಪಾಧ್ಯಕ್ಷ ಎಸ್.ಎಸ್. ಗಣೇಶ್, ಉದ್ಯಮಿ ಡಿ.ಡಿ ಬಸವರಾಜಪ್ಪ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಚ್.ಬಿ. ಮಂಜಪ್ಪ ಪಾಲ್ಗೊಳ್ಳಲಿದ್ದಾರೆ.

ಜುಲೈ 19ರಂದು ಜರುಗುವ ಕಾರ್ಯಕ್ರಮದಲ್ಲಿ ಶ್ರೀ ವಿಮಲ ರೇಣುಕ ವೀರಮುಕ್ತಿ ಮುನಿ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸಲಿದ್ದು, ಕೇದಾರಶ್ರೀಗಳ ಅರಿವಿನ ಹಣತೆ ಆಧ್ಯಾತ್ಮಿಕ ಚಿಂತನೆಗಳ ಕೃತಿಯನ್ನು ಮಾಜಿ ಸಂಸದ ಜಿಎಂ ಸಿದ್ದೇಶ್ವರ ಬಿಡುಗಡೆಗೊಳಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಎಸ್.ಎ. ರವೀಂದ್ರನಾಥ್, ಶಾಸಕ ಬಿ.ಪಿ. ಹರೀಶ್, ಮಾಜಿ ಮುಖ್ಯ ಸಚೇತಕ ಎಚ್. ಶಿವಯೋಗಿ ಸ್ವಾಮಿ, ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್, ಗಾಯತ್ರಿ ಸಿದ್ದೇಶ್ವರ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

ಜುಲೈ 20ರಂದು ನಡೆಯುವ ಕಾರ್ಯಕ್ರಮದಲ್ಲಿ ಕಣ್ವಕುಪ್ಪೆ ಮಠದ ಮುಮ್ಮಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸಲಿದ್ದು, ಲೆಕ್ಕಪರಿಶೋಧಕ ಡಾ. ಉಮೇಶ್ ಶೆಟ್ಟಿ ಇವರಿಗೆ ಸಾಧನೆ ಶಿಖರ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಮುಖ್ಯ ಅತಿಥಿಗಳಾಗಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ, ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಮಾಜಿ ಮೇಯರ್ ಚಮನ್ ಸಾಬ್, ದೂಡಾ ಆಯುಕ್ತ ಹುಲ್ಮನಿ ತಿಮ್ಮಣ್ಣ, ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ.ಬಿ. ವಿನಯ್ ಕುಮಾರ್ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ.

# ಜುಲೈ 19ರಂದು ಸುಶ್ರುತೋತ್ಸವ-2025

**ದಾವಣಗೆರೆ,ಜು.17:**

ಸುಶ್ರುತ ಆಯುರ್ವೇದ ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ದಾವಣಗೆರೆ ಇವರ ವತಿಯಿಂದ ಶಿಷ್ಯೋಪನಯನ/ಧನ್ವಂತರಿ ಹೋಮ, ಸುಶ್ರುತೋತ್ಸವ-2025 ಕಾಲೇಜು ವಾರ್ಷಿಕೋತ್ಸವ ಸಮಾರಂಭವನ್ನು ಜು.19ರಂದು ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 5:30ಕ್ಕೆ ಶಿಷ್ಯೋಪನಯನ/ಧನ್ವಂತರಿ ಹೋಮ ಜರುಗಲಿದ್ದು, ಮಧ್ಯಾಹ್ನ 2 ಗಂಟೆಯ ನಂತರ ಕಾಲೇಜು ಆವರಣದಲ್ಲಿ ಜರುಗುವ ಸುಶ್ರುತೋತ್ಸವ-2025 ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ಅಧೀಕ್ಷಕಿ ಉಮಾ ಪ್ರಶಾಂತ್, ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಸೆನೆಟ್ ಸದಸ್ಯರಾದ ಡಾ. ಜಗದೀಶ್ ಕೋನರೆಡ್ಡಿ, ಡಾ. ಎಲ್.ಡಿ. ಶ್ರೀನಿವಾಸ್ ಮತ್ತು ಹಾಸ್ಯ ಕಲಾವಿದ ಶಿವಕುಮಾರ್ ಪಾಲ್ಗೊಳ್ಳಲಿದ್ದಾರೆ.




ಕ್ರಾಂತಿದೀಪಕ್ಕೆ ಚಂದಾದಾರರಾಗಿ
9844599699


# ಉಬ್ರಾಣಿ ಹೋಬಳಿಯ ಕಾಡಂಚಿನ ಗ್ರಾಮಗಳಲ್ಲಿ ಕಾಡಾನೆ ಹಾವಳಿ





**ಚನ್ನಗಿರಿ,ಜು.17:**

ತಾಲ್ಲೂಕು ಉಬ್ರಾಣಿ ಹೋಬಳಿ ವ್ಯಾಪ್ತಿಯ ಕುಕ್ಕುವಾಡೇಶ್ವರಿ ರಕ್ಷಿತಾ ಅರಣ್ಯ ಪ್ರದೇಶ, ಜೋಳದಹಾಳ್ ಹಾಗೂ ಮಾವಿನಕಟ್ಟೆ ಭದ್ರಾ ರಾಜ್ಯ ಅರಣ್ಯ ಪ್ರದೇಶ ವ್ಯಾಪ್ತಿಯ ಕಾಡಂಚಿನ ಗ್ರಾಮಗಳಲ್ಲಿ ಒಮದು ವಾರದಿಂದ ಕಾಡಾನೆಯೊಂದು ಕಾಣಿಸಿಕೊಂಡಿದ್ದು, ರೈತರು ಬೆಳೆದ ಬೆಳೆಗಳನ್ನು ನಾಶ ಮಾಡಿ ಹಾಕುತ್ತಿದೆ. ಇದರಿಂದ ಈ ಭಾಗದ ಜನರು ಭಯಬೀತರಾಗಿ ಸಂಚರಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಒಟ್ಟು 304 ಕಿಮೀ ವ್ಯಾಪ್ತಿಯಲ್ಲಿ ದಟ್ಟ ಅರಣ್ಯ ಪ್ರದೇಶವಿದೆ. ಈ ಕಾಡಿನ ವ್ಯಾಪ್ತಿಯಲ್ಲಿ ಬೆಲೆ ಬಾಳುವ ಸಾಗುವಾನಿ, ಶ್ರೀಗಂಧ, ಬೀಟೆ, ಹೊನ್ನೆ, ಮತ್ತಿ ಸೇರಿದಂತೆ ವಿವಿಧ ಜಾತಿಯ ಮರಗಳು ಹಾಗೂ ಆನೆ, ಚಿರತೆ, ಕರಡಿ, ಕಾಡೆಮ್ಮೆ, ಕಾಡುಕೋಣ, ನವಿಲು, ಜಿಂಕೆ, ನರಿ ಮುಂತಾದ ಪ್ರಾಣಿ ಪಕ್ಷಿಗಳು ವಾಸ ಮಾಡುತ್ತಿವೆ.

ಈ ಅರಣ್ಯ ಪ್ರದೇಶ ವ್ಯಾಪ್ತಿಯಲ್ಲಿನ ಮರವಂಜಿ, ಉಬ್ರಾಣಿ, ದುರ್ವಿಗೆರೆ, ಬಂಡಿಗುಡ್ಡ, ಮಾನಮಟ್ಟಿ, ಕಗ್ಗಿ, ಮುಗಳಿಹಳ್ಳಿ, ಚಿಕ್ಕಮಳಲಿ ತಾಂಡ, ಚಿಕ್ಕಮಳಲಿ, ಕೊಡಕಿಕೆರೆ, ಚಿಕ್ಕಸಂಧಿ ಮುಂತಾದ ಕಾಡಂಚಿನ ಗ್ರಾಮಗಳಲ್ಲಿ ಕಾಡಾನೆಯೊಂದು ಕಾಣಿಸಿಕೊಂಡಿದ್ದು, ತೋಟಗಳಿಗೆ ಬಂದು ಅಡಿಕೆ ಮರಗಳನ್ನು ಬೀಳಿಸಿ, ಬಾಳೆಯನ್ನು ತಿಂದು ತೆಂಗು, ಮೆಕ್ಕೆಜೋಳ, ರಾಗಿ, ಹಲಸು ಮುಂತಾದ ಬೆಳೆಗಳನ್ನು ನಾಶ ಮಾಡಿ ರಾತ್ರಿ ಸಮಯದಲ್ಲಿದ್ದು, ಬೆಳಿಗ್ಗೆಯಾಗುತ್ತಿದ್ದಂತೆ ಕಾಡಿಗೆ ವಾಪಾಸ್ ಹೋಗುತ್ತಿದೆ. ಇದರಿಂದಾಗಿ ರೈತರು ಹಗಲು ವೇಳೆಯಲ್ಲಿ ತೋಟಗಳಿಗೆ ಹೋಗಲು ಭಯಬೀತರಾಗಿದ್ದಾರೆ.

ಕಳೆದ ಒಂದು ವಾರದಿಂದ ಈ ಭಾಗದಲ್ಲಿ ಕಾಡಾನೆಯೊಂದು ಕಾಣಿಸಿಕೊಂಡು, ರೈತರು ಬೆಳೆದ ಬೆಳೆಗಳನ್ನು ನಾಶ ಮಾಡಿ ಹಾಕಿದ್ದು, ಕಾಡಾನೆಯನ್ನು ಸೆರೆ ಹಿಡಿಯುವಂತೆ ರೈತರು ಹಾಗೂ ಗ್ರಾಮಸ್ಥರು ಮನವಿಯನ್ನು ಸಲ್ಲಿಸಿದ್ದಾರೆ. ಸಧ್ಯದ ಪರಿಸ್ಥಿತಿಯಲ್ಲಿ ಎಲಿಫೆಂಟ್ ಟಾಸ್ಕ್ ಪೋರ್ಸ್ ತರಬೇತಿಯನ್ನು ಪಡೆದಿರು ವಂತಹ ಸಿಬ್ಬಂದಿಗಳ ನಾಲ್ಕು ಜನರ ತಂಡವನ್ನು ರಚಿಸಿ, ಕಾಡಂಚಿನ ಗ್ರಾಮಗಳಲ್ಲಿ ಹಗಲು ರಾತ್ರಿ ಗಸ್ತು ಮಾಡುತ್ತಿದ್ದಾರೆ. ಚಾಮರಾಜನಗರದ ಅರಣ್ಯ ಪ್ರದೇಶದಿಂದ ಹಿಡಿದು ಚನ್ನಗಿರಿ ಅರಣ್ಯ ಪ್ರದೇಶದವರೆಗೆ ಆನೆ ಕಾರಿಡಾರ್ ಇರುವ ಕಾರಣ ಆನೆಗಳು ಬರುತ್ತವೆ. ಪುಂಡಾನೆಯನ್ನು ಸೆರೆ ಹಿಡಿಯಲು ಈಗಾಗಲೇ ಮೇಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಅನುಮತಿ ಸಿಕ್ಕ ಕೂಡಲೇ ಕಾರ್ಯಾಚರಣೆ ನಡೆಸಿ ಕಾಡಾನೆಯನ್ನು ಸೆರೆ ಹಿಡಿಯಲಾಗುವುದು ಎಂದು ವಲಯ ಅರಣ್ಯಾಧಿಕಾರಿ ಎಸ್. ಶ್ವೇತಾ ತಿಳಿಸಿದರು.

ಈ ಅರಣ್ಯ ಪ್ರದೇಶದಲ್ಲಿ ಮೂರು ಕಾಡಾನೆಗಳು ಇದ್ದವು. ಇದರಲ್ಲಿ ಈಗಾಗಲೇ ಎರಡು ಆನೆಗಳನ್ನು ಅರಣ್ಯ ಪ್ರದೇಶದ ಗಡಿ ದಾಟಿಸುವ ಕಾರ್ಯ ಮಾಡಲಾಗಿದೆ. ಇನ್ನೊಂದು ಕಾಡಾನೆಯ ಇದ್ದು, ಅನುಮತಿ ಸಿಕ್ಕ ಕೂಡಲೇ ಸೆರೆ ಹಿಡಿಯಲಾಗುವುದು. ಕಾಡಂಚಿನ ಗ್ರಾಮಗಳಲ್ಲಿನ ಜನರನ್ನು ಎಚ್ಚರಿಸುವ ಸಲುವಾಗಿ ಪ್ರತಿದಿನ ಧ್ವನಿವರ್ಧಕ ಮೂಲಕ ಪ್ರಚಾರ ಮಾಡಲಾಗುತ್ತಿದೆ. ಹಾಗೆಯೇ ದಾನಿಗಳಿಂದ ಹಣ ಸಂಗ್ರಹಿಸಿ, ಪಟಾಕಿಗಳನ್ನು ಖರೀದಿಸಿ, ಪಟಾಕಿ ಸಿಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ. ಜತೆಗೆ ರೈತರು ಕೂಡಾ ತಮ್ಮ ಜಮೀನುಗಳಲ್ಲಿ ಪಟಾಕಿ ಸಿಡಿಸಿ, ಶಬ್ದಗಳನ್ನು ಕೂಡಾ ಮಾಡುತ್ತಿದ್ದಾರೆ ಎಂದರು.

ಕಳೆದ ಒಂದು ವಾರದಿಂದ ಅಡಿಕೆ ತೋಟಗಳಲ್ಲಿ ಕಾಡಾನೆಯೊಂದು ರಾತ್ರಿ ವೇಳೆ ಕಾಣಿಸಿಕೊಳ್ಳುತ್ತಿದೆ. ಜತೆಗೆ ರೈತರು ಬೆಳೆದ ಅಡಿಕೆ, ಬಾಳೆ, ತೆಂಗು, ಮೆಕ್ಕೆಜೋಳ ಮುಂತಾದ ಬೆಳೆಗಳನ್ನು ನಾಶ ಮಾಡುತ್ತಿದೆ. ಹೀಗಾಗಿ ಹಗಲು ವೇಳೆಯಲ್ಲಿ ಕೂಡಾ ರೈತರು ಗುಂಪು ಗುಂಪಾಗಿ ತೋಟಗಳಿಗೆ ಹೋಗುವಂತಾಗಿದೆ. ಆಗಾಗಿ ಕೂಡಲೇ ರೈತರಿಗೆ ತೊಂದರೆ ಕೊಡುತ್ತಿರುವ ಕಾಡಾನೆಯನ್ನು ಸೆರೆ ಹಿಡಿದು ರೈತರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ಅರಣ್ಯ ಇಲಾಖೆಯವರು ಮುಂದಾಗಬೇಕಾಗಿದೆ ಎನ್ನುತ್ತಾರೆ ಮರವಂಜಿ ತಾಂಡ ಗ್ರಾಮದ ಅಣ್ಣಪ್ಪ.

# ಗಾಳಿಪಟದ ದಾರಕ್ಕೆ ಸಿಲುಕಿ ನರಳುತ್ತಿದ್ದ ಗರುಡ ಪಕ್ಷಿಯ ರಕ್ಷಣೆ

**ಚನ್ನಪಟ್ಟಣ,ಜು.17:**

ಗಾಳಿಪಟದ ದಾರಕ್ಕೆ ಸಿಲುಕಿ ಪ್ರಾಣಾಪಾಯಕ್ಕೆ ತುತ್ತಾಗಿದ್ದ ಗರುಡ ಪಕ್ಷಿಯನ್ನು ಸಾರ್ವಜನಿಕರ ಸಹಾಯದೊಂದಿಗೆ ಅಜಾದ್ ಸುರೇಶ್ ರಕ್ಷಣೆ ಮಾಡಿ, ಪಶುವೈದ್ಯ ರಿಂದ ಚಿಕಿತ್ಸೆ ಕೊಡಿಸಿ, ಅರಣ್ಯಾಧಿಕಾರಿಗಳಿಗೆ ಹಸ್ತಾಂತರ ಮಾಡಿದ್ದಾರೆ.



ಮೂಲತಃ ವಕೀಲರಾಗಿರುವ ಸುರೇಶ್, ಉರುಗ ಪ್ರೇಮಿಯಾಗಿದ್ದು ಈಗಾಗಲೇ ತಾಲ್ಲೂಕಿನಾದ್ಯಂತ ಸಾವಿರಾರು ಹಾವುಗಳನ್ನು ಹಿಡಿದು ಸುರಕ್ಷಿತ ಸ್ಥಳಕ್ಕೆ ಬಿಡುವ ಮೂಲಕ ಜನರಲ್ಲಿ ಸ್ನೇಕ್ ಸುರೇಶ್ ಎಂದೇ ಪರಿಚಿತರಾಗಿದ್ದಾರೆ. ಅಜಾದ್ ಸಂಘಟನೆಯ ಮೂಲಕ ಸಾಮಾಜಿ ಚಟುವಟಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವ ಸುರೇಶ್, ಅಪಾಯಕ್ಕೆ ಸಿಲುಕಿದ ಪ್ರಾಣಿ-ಪಕ್ಷಿ ರಕ್ಷಣೆ ಸದಾ ಮುಂದಾಗುತ್ತಾರೆ.

ಈ ಸಂಬಂಧ ಮಾತನಾಡಿದ ಅಜಾದ್ ಸುರೇಶ್, ಮನಸ್ಸಿನ ಒತ್ತಡ ನಿವಾರಣೆಗೆ ಗಾಳಿ ಪಟ ಹಾರಿಸುವ ಕಲೆ ಮನರಂಜನೆ ಅತ್ಯುತ್ತಮ ಕ್ರೀಡೆ ಅದರೆ ತಮ್ಮ ಖುಷಿಗಾಗಿ ಪ್ರಾಣಿ ಪಕ್ಷಿಗಳ ಜೀವಕ್ಕೆ ಕಂಟಕವನ್ನುಂಟು ಮಾಡುವ ವಸ್ತುಗಳನ್ನು ಬಳಸುವಾಗ ದಯವಿಟ್ಟು ವಿವೇಚನೆಯಿಂದ ವರ್ತಿಸಿ. ಪ್ರಾಣಿ ಪಕ್ಷಿಗಳಿಗೂ ಸಹ ನಮ್ಮಂತೆಯೇ ಬದುಕುವ ಹಕ್ಕಿದೆ ಎಂದು ಎಂದು ಸಾರ್ವಜನಿಕರಿಗೆ ಕಿವಿ ಮಾತು ಹೇಳಿದರು.

ಗಾಳಿಪಟದ ದಾರಕ್ಕೆ ಸಿಲುಕಿ ನಿತ್ರಾಣಗೊಂಡು ಹಾರಲಾಗದ ಸ್ಥಿತಿಯಲ್ಲಿದ್ದ ಗರುಡ ಪಕ್ಷಿಗೆ ಸೂಕ್ತ ಚಿಕಿತ್ಸೆಯನ್ನು ನೀಡಿದ ಪಶು ವೈದ್ಯರಾದ ಸಹೋದರಿ ರಕ್ಷಿತಾ ಹಾಗೂ ರಕ್ಷಣೆಯ ಸಂದರ್ಭದಲ್ಲಿ ಸಹಕರಿಸಿದ ಮುದುಗೆರೆ ಗ್ರಾಮದ ಮಂಜುನಾಥ್ ಹಾಗೂ ಸಾರ್ವಜನಿಕರಿಗೆ ಅಜಾದ್ ಸುರೇಶ್ ರಾಮಕೃಷ್ಣ ಧನ್ಯವಾದ ಸಲ್ಲಿಸಿದರು.

# ಗ್ರಾಪಂಗೆ ಬೀಗ ಜಡಿದು ಸದಸ್ಯರ ಪ್ರತಿಭಟನೆ

**ಚನ್ನಪಟ್ಟಣ,ಜು.17:**

ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿಯಲ್ಲಿ ಪಿಡಿಓ ಬಸವರಾಜು ಹಾಗೂ ಪಂಚಾಯ್ತಿ ಅಧ್ಯಕ್ಷ ಇಬ್ಬರು ಸೇರಿ ಸುಮಾರು 50 ಲಕ್ಷಕ್ಕೂ ಹೆಚ್ಚು ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ಮಾಜಿ ಗ್ರಾಮ ಪಂಚಾಯ್ತಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಬ್ಯಾಡರಹಳ್ಳಿ ರಾಮಚಂದ್ರು ಹಾಗೂ ಹಾಲಿ ಗ್ರಾಮ ಪಂಚಾ ಸದಸ್ಯರು ಆರೋಪಿಸಿದರು.

ತಾಲ್ಲೂಕಿನ ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿಗೆ ಬಾಗಿಲು ಹಾಕಿ ಪ್ರತಿಭಟನೆ ನಡೆಸಿದ ಗ್ರಾಮ ಪಂಚಾಯತಿ ಸದಸ್ಯರು ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿಯಲ್ಲಿ 15ನೇ ಹಣಕಾಸು ಮತ್ತು ಗ್ರಾಮಗಳಿಂದ ಸಂಗ್ರಹವಾಗಿದ್ದ ತೆರಿಗೆ ಹಣ ಮತ್ತು ಸರ್ಕಾರದಿಂದ ಬಿಡುಗಡೆಯಾಗಿದ್ದ ಅನುದಾನ ಒಟ್ಟು 50 ಲಕ್ಷಕ್ಕೂ ಹೆಚ್ಚು ಹಣವನ್ನು ಪಿಡಿಓ ಬಸವರಾಜು ಅವರು ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಗ್ರಾಮ ಪಂಚಾಯ್ತಿಯ ಎರಡು ಖಾತೆಗಳಲ್ಲೂ ಹಣವನ್ನು ಡ್ರಾ ಮಾಡಿದ್ದಾರೆ. ಇಂತಹ ಪಿಡಿಓ ನಮ್ಮ ಪಂಚಾಯ್ತಿಗೆ ಬೇಡ ಈತನ ವಿರುದ್ಧ ಈಗಲೇ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಕ್ತ ಕ್ರಮ ಜರುಗಿಸುವಂತೆ ಮನವಿ ಮಾಡಿದ್ದೇವೆ.



ಈ ಕೂಡಲೇ ತಾಲ್ಲೂಕು ಪಂಚಾಯ್ತಿ ಇಓ ಹಾಗೂ ಜಿಲ್ಲಾ ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳು ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ಸೂಕ್ತ ತನಿಖೆ ನಡೆಸಿ ಇತನ ವಿರುದ್ಧ ಕಾನೂನು ರೀತಿಯಲ್ಲಿ ಕ್ರಮ ಜರುಗಿಸಬೇಕು ಎಂದು ಗ್ರಾಮ ಪಂಚಾಯತಿ ಸದಸ್ಯ ಹಾಗೂ ಮಾಜಿ ಉಪಾಧ್ಯಕ್ಷ ಬ್ಯಾಡರಹಳ್ಳಿ ರಾಮಚಂದ್ರು ಆಗ್ರಹಿಸಿದರು.

ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿಯಲ್ಲಿ ಸುಮಾರು 50 ಲಕ್ಷಕ್ಕೂ ಹೆಚ್ಚು ಅಭಿವೃದ್ಧಿ ಕಾಮಗಾರಿಗಳು ನಡೆದಿದ್ದು, ಕೆಲವು ಟೆಂಡರ್ ಮೂಲಕ ನಡೆದಿವೆ.

ಆದರೆ ಇನ್ನೂ ಕೆಲವು ಕಾಮಗಾರಿಗಳಲ್ಲಿ ಖರೀದಿ ಸಾಮಗ್ರಿಗಳು ತಂದಿದ್ದೇವೆ ಎಂದು ಹೇಳುತ್ತಾರೆ ಆದರೆ ಇವರು ಯಾವುದೇ ಮೋಟರ್ ಪಂಪ್‌ಗಳನ್ನಾಗಲಿ ಕುಡಿಯುವ ನೀರಿಗೆ ಸಂಬಂಧಿಸಿದ ವಸ್ತುಗಳನ್ನಾಗಲಿ ಖರೀದಿ ಮಾಡದೆ ಗ್ರಾಮ ಪಂಚಾಯ್ತಿ ಸದಸ್ಯರ ಗಮನಕ್ಕೆ ಬರದಂತೆ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಕೆಲಸ ಮಾಡಿದ್ದೇ ಹಣವನ್ನು ಡ್ರಾ ಮಾಡಿದ್ದಾರೆ ಇಡೀ ಗ್ರಾಮ ಪಂಚಾಯತಿಯನ್ನು ವಂಚಿಸಿದ್ದಾರೆ.

ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷೆ ಪೂರ್ಣಿಮ ಮಾತನಾಡಿ, ನಾನು ಅಧ್ಯಕ್ಷೆಯಾಗಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಪ್ರಮಾಣಿಕವಾಗಿ ಮಾಡಬೇಕೆಂದು ಅಂದು ಕೊಂಡಿದ್ದೆ ಆದರೆ ಈ ಪಿಡಿಓ ನಾನು ಮಾಡುವ ಕೆಲಸ ಕಾರ್ಯಯಗಳಿಗೆ ಯಾವುದೇ ಸ್ಪಂಧನೆ ಮಾಡುತ್ತಿರಲಿಲ್ಲ.

ಮನೆ ಮನೆ ಬಾಗಿಲಿಗೆ ಹೋಗಿ ಇ-ಖಾತೆ ಮಾಡುವಂತೆ ಸುಮಾರು ಫೈಲ್‌ಗಳನ್ನು ತಂದುಕೊಟ್ಟಿದ್ದೆ ಆದರೆ ಒಂದು ಇ-ಖಾತೆಯನ್ನು ಮಾಡಲಿಲ್ಲ ಇನ್ನೂ ಆ ಫೈಲ್‌ಗಳು ವಿಲೇವಾರಿಯಾಗದೆ ಗ್ರಾಮ ಪಂಚಾಯ್ತಿಯಲ್ಲೇ ಬಿದ್ದಿವೆ. ಯಾರು ಅವರಿಗೆ ಅನುಕೂಲ ಮಾಡಿಕೊಡುತ್ತಾರೆ ಅಂತಹವರಿಗೆ ಇ-ಖಾತೆಯನ್ನು ಮಾಡಿಕೊಟ್ಟಿದ್ದಾರೆ ಎಂದು ಆರೋಪಿಸಿದರು

ಸಂದರ್ಭದಲ್ಲಿ ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯ್ತಿ ಸದಸ್ಯರಾದ ರಂಗಪ್ಪ, ಬಸವರಾಜು, ಜ್ಯೋತಿ, ಮುನಿವೆಂಕಟಮ್ಮ, ಸಿದ್ದಪ್ಪ, ಲಕ್ಷ್ಮಿ, ಗುರುರಾಜು ಇದ್ದರು.

## ಪತ್ರ ಕಳೆದಿದೆ

ಜಾನಕಮ್ಮ ಕೋಂ ಲೇಟ್ ಶಿವಲಿಂಗಪ್ಪ ಹೆಚ್.ಎಸ್. ಸುಮಾರು 70 ವರ್ಷ ವಯಸ್ಸು, ವಾಸ: ಹೆಚ್‌ಎಸ್‌ಆರ್ ನಿಲಯ, ತೀರ್ಥಪ್ಪ ಕ್ಯಾಂಪ್, ಮತ್ತೂರು ರಸ್ತೆ, ಶಿವಮೊಗ್ಗ, ಆದ ನಾನು ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ,

ನಾನು ಮೇಲ್ಕಂಡ ವಿಳಾಸದಲ್ಲಿ ವಾಸವಾಗಿದ್ದು, ನನ್ನ ವಿಭಾಗ ಪತ್ರದ ಎಸ್ ಆರ್ ನಂ: 12931/2022-23 ಈ ಸದರಿ ವಿಭಾಗ ಪತ್ರವು ಉಪನೋಂದಣಾಧಿಕಾರಿ ಶಿವಮೊಗ್ಗ ಇಲ್ಲಿ ನೋದಾಣಿಯಾಗಿದ್ದು ಈ ಸದರಿ ದಾಖಲಾತಿಯು **ದಿನಾಂಕ:15-7-2025** ರಂದು ಗೋಪಾಳದ ಹತ್ತಿರ ಇರುವ ಅಂಗಡಿಯಲ್ಲಿ ಜೆರಾಕ್ಸ್ ಮಾಡುವ ಸಮಯದಲ್ಲಿ ಶಿವಮೊಗ್ಗದಲ್ಲಿ ಕಳೆದುಹೋಗಿರುತ್ತದೆ. ಈ ಸದರಿ ವಿಭಾಗ ಪತ್ರದ ನಕಲು ಪತ್ರಿ ಅವಶ್ಯವಿದ್ದು ಉಪನೋಂದಣಾಧಕಾರಿ ಶಿವಮೊಗ್ಗದಿಂದ ಪಡೆಯಲು ಪ್ರಮಾಣೀಕರಿಸುತ್ತೇನೆ.

ಇದಕ್ಕೆ ಸಂಬಂದಿಸಿದಂತೆ ದಿನಾಂಕ:15-07-2025 ರಂದು ಅರ್ಜಿ ಸಂಖ್ಯೆ: PO801S250001020 ತುಂಗಾ ನಗರ ಪೋಲಿಸು ಠಾಣೆಯಲ್ಲಿ ಪ್ರಕರಣ ದಾಖಲೆಮಾಡಿರುತ್ತೇವೆ.

ಈ ಮೇಲೆ ಹೇಳಿದ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ.

ದಿನಾಂಕ: 17/07/2025
ಸ್ಥಳ: ಶಿವಮೊಗ್ಗ

ಜಾನಕಮ್ಮ
ಪ್ರಮಾಣಕರ್ತ

# ಅಂಗವಿಕಲರಿಗಾಗಿ ಉದ್ಯೋಗ ಮೇಳ :140 ಜನ ಭಾಗಿ

**ತುಮಕೂರು,ಜು.17:**

ನಗರದ ಜಯನಗರ ಪೂರ್ವದ ಹೆಲನ್ ಕೆಲರ್ ವಾಕ್ ಮತ್ತು ಶ್ರವಣದೋಷ ಮಕ್ಕಳ ಶಾಲೆಯಲ್ಲಿ ಚೆಶೈರ್ ಡಿಸಬಲಿಟಿ ಟ್ರಸ್ಟ್, ಹೆಲನ್ ಕೆಲರ್ ಇಂಟಿಗ್ರೇಟೆಡ್ ಶಿಕ್ಷಣ ಸಂಸ್ಥೆ ಮತ್ತು ಅಂಗವಿಕಲರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಹಯೋಗದಲ್ಲಿ ಅಂಗವಿಕಲರಿಗಾಗಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿತ್ತು.

ಅಂಗವಿಕಲರಿಗಾಗಿ ಏರ್ಪಡಿಸಿದ್ದ ಉದ್ಯೋಗ ಮೇಳದಲ್ಲಿ ಸುಮಾರು 140 ಜನ ವಿಕಲಚೇನರು ಪಾಲ್ಗೊಂಡಿದ್ದರು. ಬೆಂಗಳೂರಿನ ಪ್ರತಿಷ್ಠಿತ ಶಾಹಿ ಗ್ರಾರ್ಮೇಂಟ್ಸ್,ಶಂಕರ್ ಎಲೆಕ್ಟ್ರಾನಿಕ್ಸ್ ಸೇರಿದಂತೆ ಬೆಂಗಳೂರು ಮತ್ತುತುಮಕೂರಿನ 12ಕ್ಕೂ ಕಂಪನಿಗಳು ಭಾಗವಹಿಸಿದ್ದು, ಪಾವಗಡದ ಬಿಎಸ್ಸಿ ಪದವಿಧರೆಗೆ ಸ್ಥಳದಲ್ಲಿಯೇ ಶಂಕರ್ ಎಲೆಕ್ಟ್ರಾನಿಕ್ಸ್ ಸಂಸ್ಥೆಯವರು ಉದ್ಯೋಗ ಪತ್ರ ನೀಡಿದರೆ, ಇತರೆ 70 ಜನರು ವಿವಿಧ ಸಂಸ್ಥೆಗಳಲ್ಲಿ ಉದ್ಯೋಗಕ್ಕೆ ಆಯ್ಕೆಯಾಗಿದ್ದಾರೆ.




ಅಂಗವಿಕಲರಉದ್ಯೋಗ ಮೇಳ ಕುರಿತು ಮಾತನಾಡಿದ ಹೆಲನ್‌ಕೆಲರ್‌ಇಂಟಿಗ್ರೇಟೆಡ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಗಾಯಿತ್ರಿ ರವೀಶ್,ನಮ್ಮ ಸಂಸ್ಥೆ ಚಶೈರ್ ಡಿಸಿಬಿಲಿಟಿ ಟ್ರಸ್ಟ್‌ನ ಸಹಕಾರದಲ್ಲಿ ಕಳೆದ 2025ರ ಜನವರಿಯಿಂದ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಪ್ರವಾಸ ಮಾಡಿ,ಉದ್ಯೋಗ ಮಾಡುವ ಆಸಕ್ತಿ ಹೊಂದಿರುವ ವಿಕಲಚೇತನರನ್ನು ಗುರುತಿಸಿ, ಅವರಿಗೆ ಅಗತ್ಯ ತರಬೇತಿ ನೀಡಿ, ಇಂದಿನ ಉದ್ಯೋಗ ಮೇಳಕ್ಕೆ ಬರುವಂತೆ ವ್ಯವಸ್ಥೆ ಮಾಡಲಾಗಿತ್ತು.ಸುಮಾರು 140 ಜನರು ಪಾಲ್ಗೊಂಡಿದ್ದ ಈ ಮೇಳದಲ್ಲಿ 70ಕ್ಕೂ ಹೆಚ್ಚು ಮಕ್ಕಳು ಶಾರ್ಟ್ ಲೀಸ್ಟ್ ಆಗಿದ್ದಾರೆ. ಅದರಲ್ಲಿ ಕೆಲವರಿಗೆ ಸ್ಥಳದಲ್ಲಿಯೇ ಉದ್ಯೋಗ ಪತ್ರ ಸಹ ನೀಡಿರುವುದು ಸಂತಸದ ವಿಚಾರವಾಗಿದೆ.ಕಳೆದ ಐದು ವರ್ಷಗಳಿಂದ ಚಶೈರ್ ಡಿಸಿಬಿಲಿಟಿ ಟ್ರಸ್ಟ್ ಅಂಗವಿಕಲರಿಗಾಗಿ ಕೌಶಲ್ಯ ತರಬೇತಿಯನ್ನು ಸಹ ನೀಡುತ್ತಾ ಬಂದಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಮೇಳಗಳ ಮೂಲಕ ವಿಕಲಚೇತನರ ಸ್ವಾವಲಂಬಿ ಬದುಕಿಗೆ ನೆರವಾಗುವ ಬಯಕೆ ಇದೆ ಎಂದರು.

ಚಶೈರ್ ಡಿಸಿಬಿಲಿಟಿ ಟ್ರಸ್ಟ್‌ನ ವ್ಯವಸ್ಥಾಪಕರಾದ ಅನುರಾಧ ಮಾತನಾಡಿ, ಸಮಾಜಕ್ಕೆ, ಪೋಷಕರಿಗೆ ಹೊರೆ ಎನಿಸುವ ವಿಕಲಚೇತನರಿಗೆ ಸ್ವಾವಲಂಬಿ ಬದುಕು ರೂಪಿಸಬೇಕೆಂಬ ಘನ ಉದ್ದೇಶದಿಂದ ನಮ್ಮ ಸಂಸ್ಥೆ ಗ್ರಾಮೀಣ ಭಾಗದಲ್ಲಿ ಸ್ಥಳೀಯವಾಗಿ ಅಂಗವಿಕಲರ ಶಿಕ್ಷಣ ಮತ್ತು ಉದ್ಯೋಗಕ್ಕೆ ಶ್ರಮಿಸುತ್ತಿರುವ ಸಂಸ್ಥೆಗಳೊಂದಿಗೆ ಸೇರಿ ಉದ್ಯೋಗ ಮೇಳಗಳನ್ನು ಆಯೋಜಿಸುತ್ತಾ ಬರಲಾಗುತ್ತಿದೆ.ಅಲ್ಲದೆ ಉದ್ಯೋಗಾಸಕ್ತ ಅಂಗವಿಕಲರಿಗೆ ಅವರ ಆಸಕ್ತಿಯ ಕ್ಷೇತ್ರದಲ್ಲಿಯೇ ಅಗತ್ಯ ತರಬೇತಿ ನೀಡಿ, ಉದ್ಯೋಗ ಪಡೆದುಕೊಳ್ಳುವಂತಹ ವಾತಾವರಣ ಸೃಜಿಸಲಾಗುತ್ತಿದೆ ಎಂದರು.ವೇದಿಕೆಯಲ್ಲಿ ಅಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

# ಜನ ಶಿಕ್ಷಣ ಸಂಸ್ಥೆಯಲ್ಲಿ ವಿಶ್ವಕೌಶಲ್ಯ ದಿನಾಚರಣೆ




**ಶಿವಮೊಗ್ಗ,ಜು.17:**

ಸ್ಕಿಲ್ ಇಂಡಿಯಾ ಮಿಷನ್ ಪ್ರಧಾನಿ ನರೇಂದ್ರ ಮೋದಿಯವರಿಂದ ಚಾಲನೆಗೊಂಡು ಯಶಸ್ವಿ 10 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ ಸಂದರ್ಭದಲ್ಲಿ ಭಾರತ ಸರ್ಕಾರವು ವಿಶ್ವಕೌಶಲ್ಯ ದಿನಾಚರಣೆಯನ್ನು ಜು.15ರಂದು ಆಚರಿಸಿ 7 ದಿನಗಳವರೆಗೆ ವಿವಿಧ ಚಟುವಟಿಕೆಗಳನ್ನು ನಡೆಸಲು ಮತ್ತು ಸ್ವಚ್ಛತಾ ಪಕವಾಡ ಕಾರ್ಯಕ್ರಮಗಳನ್ನು 16ರಿಂದ 31 ರವರೆಗೆ ನಡೆಸಲು ಸೂಚಿಸಿದೆ.

ಈ ನಿಮಿತ್ತ 15 ರಂದು ಜನ ಶಿಕ್ಷಣ ಸಂಸ್ಥೆಯು ಸ್ವಚ್ಛತಾ ಜಾಥಾವನ್ನು ಹಮ್ಮಿಕೊಂಡಿತ್ತು. ಸಂಸ್ಥೆಯ ನಿರ್ದೇಶಕಿ ಎಸ್.ವೈ.ಅರುಣಾದೇವಿ ಜಾಥಾವನ್ನು ಉದ್ಘಾಟಿಸಿ, ಭಾವಹಿಸಿದ ಕಲಿಕಾರ್ಥಿಗಳನ್ನುದ್ದೇಶಿಸಿ ಆರ್ಟಿಫಿಷಿಯಲ್ ಇಂಟೆಲಿಜನ್ಸಿ ಮತು ್ತ ಇಂದಿನ ತಂತ್ರಜ್ಞಾನದ ಮೂಲಕ ಉದ್ಯಮಶೀಲತೆಯ ಪ್ರಾಮುಖ್ಯತೆಯ ಕುರಿತು ಮಾತನಾಡಿದರು. ಲೀಡ್ ಬ್ಯಾಂಕ್ ಡಿಸ್ಟ್ರಿಕ್ಟ್ ಮ್ಯಾನೇಜರ್ ಹನುಮಂತಪ್ಪ, ಸಹಾ ಯಕ ಮ್ಯಾನೇಜರ್ ಹೊನ್ನಪ್ಪ, ಸಾಕ್ಷರತಾಧಿಕಾರಿ ಬಿ. ಆರ್. ಶಂಕ್ರಪ್ಪ, ಉಪಸ್ಥಿತರಿದ್ದರು.

ಸ್ವಚ್ಛತಾ ಪ್ರತಿಜ್ಞಾವಿಧಿಯನ್ನು ಎಸ್.ವೈ. ಅರುಣಾ ದೇವಿ ಸಂಸ್ಥೆಯ ಸಿಬ್ಬಂದಿ ಮತ್ತು ಕಲಿಕಾರ್ಥಿಗಳಿಗೆ ಬೋಧಿಸಿದರು.

ಈ ಕಾರ್ಯಕ್ರಮವು ಜನ ಶಿಕ್ಷಣ ಸಂ ಸ್ಥೆಯು ನಡೆಸುತ್ತಿರುವ ಜಿಲ್ಲೆಯ ಎಲ್ಲಾ 60 ಕೇಂದ್ರ ಗಳಲ್ಲಿ ಏಕಕಾಲದಲ್ಲಿ ನಡೆಯಿತು. ಸುಮಾರು 1200 ಕಲಿಕಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಪುರಸಭೆ ಮುಖ್ಯಾಧಿಕಾರಿಗೆ ಡಿಎಸ್‌ಎಸ್ ಅಭಿನಂದನೆ

**ಹರಪನಹಳ್ಳಿ,ಜು.17:**

ಕರ್ನಾಟಕ ದಲಿತ ಸಂಘರ್ಷ ಸಮಿತಿ ಭೀಮವಾದ ವತಿಯಿಂದ ಪುರಸಭೆಯಿಂದ ನಗರ ಸಭೆಗೆ ಮೇಲ್ದ ರ್ಜೆಗೆ ಹೊಂದಿರುವಂತ ಮುಖ್ಯ ಅಧಿಕಾರಿಗಳಾಗಿ ಅಧಿಕಾರ ಸ್ವೀಕಾರ ಮಾಡಿರುವಂತ ರೇಣುಕಾ ದೇಸಾಯಿ ಅವರಿಗೆ ಡಿಎಸ್ ಎಸ್ ಭೀಮವಾದ ವತಿಯಿಂದ ಸನ್ಮಾನಿಸಲಾಯಿತು.



ಪಟ್ಟಣದಲ್ಲಿರುವ ಡಾ.ಬಿ.ರ್ ಅಂಬೇಡ್ಕರ್ ಭವನ ಹಾಗೂ ಡಾ. ಬಾಬು ಜಗಜೀವನ್ ರಾಮ್ ಭವನಗಳ ರೂಪರೇಷೆಗಳ ಬಗ್ಗೆ ಡಿಎಸ್ ಎಸ್ ಭೀಮವಾದ ಸಂಘಟನೆಯಿಂದ ಹೊಸದಾಗಿ ಬಂದಿರುವ ಪುರಸಭೆಯ ಮುಖ್ಯ ಅಧಿಕಾರಿಗಳಿಗೆ ಸ್ವಾಗತಿಸಿ ಮತ್ತು ಸನ್ಮಾನಿಸಿ ಭವನಗಳ ಬಗ್ಗೆ ಚರ್ಚಿಸಲಾಯಿತು

ಈ ಸಂದರ್ಭದಲ್ಲಿ ಸುಭಾಷ್. ಕೆ ಅಧ್ಯಕ್ಷರು ಡಿಎಸ್‌ಎಸ್ ಭೀಮವಾದ ನಾಗರಾಜ್ ಬಿದ್ದಾಡಿ ಉಪಾಧ್ಯಕ್ಷರು ಡಿಎಸ್‌ಎಸ್ ಭೀಮವಾದ ಛತ್ರಪತಿ ಖಜಾಂಚಿ ಡಿಎಸ್‌ಎಸ್ ಭೀಮವಾದ ರಮೇಶ್ ತೌಡೂರ್ ಸದಸ್ಯರು ಡಿಎಸ್‌ಎಸ್ ಭೀಮವಾದ ಹಾಗೂ ಯೋಗೀಶ್ ಸದಸ್ಯರು ಡಿಎಸ್‌ಎಸ್ ಭೀಮವಾದ ಹಾಜರಿದ್ದರು.

# ತುಮುಲ್ ಹಾಲು ಸಂಗ್ರಹ 10 ಲಕ್ಷ ಲೀಟರ್‌ಗೆ ಏರಿಕೆ

**ತುಮಕೂರು,ಜು.17:**

ತುಮಕೂರು ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ (ತುಮುಲ್) ಪ್ರಸ್ತುತ ಪ್ರತಿ ದಿನ ಹಾಲು ಸಂಗ್ರಹ ಪ್ರಮಾಣ 10.50 ಲಕ್ಷ ಲೀಟರ್‌ಗೆ ಏರಿಕೆಯಾಗಿದೆ. ಮೇ ತಿಂಗಳ ಅಂತ್ಯದಲ್ಲಿ 9.50 ಲಕ್ಷ ಲೀಟರ್ ಸಂಗ್ರಹವಾಗಿತ್ತು. ದಿನಗಳು ಕಳೆದಂತೆ ಜಿಲ್ಲೆಯಲ್ಲಿ ಹಾಲು ಉತ್ಪಾದನೆ ಹೆಚ್ಚಳವಾಗುತ್ತಿದೆ.

ತಾಲ್ಲೂಕಿನ ಮಲ್ಲಸಂದ್ರದ ತುಮುಲ್ ಆಡಳಿತ ಕಚೇರಿ ಬಳಿ ತಿರುಪತಿ ತಿಮ್ಮಪ್ಪ ದೇವಸ್ಥಾನದ ಲಡ್ಡು ತಯಾರಿಕೆಗೆ ತುಪ್ಪ ಸಾಗಿಸುವ ಟ್ಯಾಂಕರ್ ವಾಹನಕ್ಕೆ ಅಧ್ಯಕ್ಷ ಎಚ್.ವಿ.ವೆಂಕಟೇಶ್ ಚಾಲನೆ ನೀಡಿದ ನಂತರ ಮಾತನಾಡಿದರು.

ತಿರುಪತಿ ತಿಮ್ಮಪ್ಪನ ದೇವಾಲಯಕ್ಕೆ ನೇರವಾಗಿ ತುಪ್ಪ ಪೂರೈಸುವ ಅವಕಾಶವನ್ನು ಕೆಎಂಎಫ್ ತನ್ನ ವ್ಯಾಪ್ತಿಯ ಹಾಲು ಒಕ್ಕೂಟಗಳಿಗೆ ಕಲ್ಪಿಸಿದೆ. ಹಾಗಾಗಿ ತುಪ್ಪವನ್ನು ಟ್ಯಾಂಕರ್ ಮೂಲಕ ಟಿಟಿಡಿಗೆ ಪೂರೈಸುವ ಕಾರ್ಯವನ್ನು ತುಮುಲ್ ಆರಂಭಿಸಿದೆ ಎಂದರು.

ಪ್ರತಿದಿನ ಶೇಖರಣೆ ಆಗುತ್ತಿರುವ ಹಾಲಿನಲ್ಲಿ ಬೆಂಗಳೂರಿನಲ್ಲಿ 1.95 ಲಕ್ಷ ಲೀಟರ್, ತುಮಕೂರಿನಲ್ಲಿ 1.20 ಲಕ್ಷ ಲೀಟರ್ ಮಾರಾಟ ಮಾಡಲಾಗುತ್ತಿದೆ. ಮುಂಬೈನಲ್ಲಿ 1 ಲಕ್ಷ ಲೀಟರ್, ಕೇರಳದಲ್ಲಿ 50 ಸಾವಿರ ಲೀಟರ್ ಮಾರಾಟವಾಗುತ್ತಿದೆ. 80 ಸಾವಿರ ಲೀಟರ್ ಹಾಲನ್ನು ಪೌಡರ್ ಮಾಡಿ ಶಾಲಾ ಮಕ್ಕಳ ಕ್ಷೀರಭಾಗ್ಯ ಯೋಜನೆಗೆ ಕೊಡಲಾಗುತ್ತಿದೆ. 1 ಲಕ್ಷ ಲೀಟರ್ ಮೊಸರು, 4 ಟ್ಯಾಂಕರ್ ಲೋಡ್ ತುಪ್ಪ ಮಾರಾಟವಾಗುತ್ತಿದೆ. ತುಮುಲ್ ಸಂಗ್ರಹಿಸುವ ಎಲ್ಲ ಹಾಲನ್ನೂ ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ತುಮುಲ್ ನಿರ್ದೇಶಕರಾದ ಡಿ.ಕೃಷ್ಣಕುಮಾರ್, ಮಹಾಲಿಂಗಪ್ಪ, ಎಂ.ಕೆ.ಪ್ರಕಾಶ್, ಭಾರತಿ ಶ್ರೀನಿವಾಸ್, ಪ್ರಕಾಶ್, ನಂಜೇಗೌಡ, ನಾಗೇಶ್‌ಬಾಬು, ಸಿದ್ದಲಿಂಗಯ್ಯ, ಚಂದ್ರಶೇಖರರೆಡ್ಡಿ, ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸ್ ಉಪಸ್ಥಿತರಿದ್ದರು.

# ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ


**ತುಮಕೂರು,ಜು.17:**

ಚಾಮುಂಡೇಶ್ವರಿ ನಗರ, ಶಿರಾಗೇಟ್ ಬಳಿಯ ಚಾಮುಂಡೇಶ್ವರಿ ಶಕ್ತಿಪೀಠ ಚಾರಿಟಬಲ್ ಟ್ರಸ್ಟ್ ವತಿಯಿಂದ 27ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಆಯೋಜಿಸಲಾಗಿತ್ತು.



ಜು.17 ರಂದು ದೇವಿಗೆ ಗಣಪತಿಪೂಜೆ, ಹೋಮ, ನವಗ್ರಹ ಹೋಮ, ದುರ್ಗಾ ಹೋಮ, ಚಂಡಿ ಹೋಮ, ಗಾಯತ್ರಿ ಹೋಮ, ಮಹಾ ಮೃತ್ಯುಂ ಜಯ ಹೋಮ, ಪೂರ್ಣಾಹುತಿ, ಯಾಗ ಫಲ ಸ್ವೀಕಾರ ನಂತರ ಮಹಾ ಕುಂಭಾಭಿಷೇಕ, ಅಲಂಕಾರ, ಅಷ್ಟಾವಧಾನ ಸೇವೆ ಮಹಾ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆದವು. ಬಂದ ಭಕ್ತಾದಿಗಳಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಜು.18 ರಂದು ಬೆಳಗ್ಗೆ 11 ಗಂಟೆಗೆ ಅಮ್ಮನವರ ಉತ್ಸವ ಪ್ರಮುಖ ಬೀದಿಗಳಲ್ಲಿ ಸಾಗಲಿದ್ದು, ಭಕ್ತಾದಿಗಳು ದೇವಿಯ ದರ್ಶನ ಪಡೆದು ಪುನೀತರಾಗುವಂತೆ ಧರ್ಮದರ್ಶಿಗಳಾದ ಎಸ್.ಲೋಕೇಶ್ ಹಾಗೂ ಅರ್ಚಕರಾದ ಟಿ.ಎಲ್.ಪುನೀತ್ ಅವರುಗಳು ಮನವಿ ಮಾಡಿದ್ದಾರೆ.



**ತುಮಕೂರಿನ ಹನುಮಂತಪುರದ ಪೇಟೆ ಕೊಲ್ಲಾಪುರದಮ್ಮ ದೇವಸ್ಥಾನದಲ್ಲಿ ಆದಿಶಕ್ತಿ ಚಾಮುಂಡೇಶ್ವರಿ ದೇವಿಯ ಜನ್ಮವರ್ಧಂತಿ ಅಂಗವಾಗಿ ಗುರುವಾರ ವಿಶೇಷ ಅಲಂಕಾರ, ಪೂಜೆ ಹಮ್ಮಿಕೊಳ್ಳಲಾಗಿತ್ತು. ಶಾಸಕ ಜಿ.ಬಿ.ಜ್ಯೋತಿಗಣೇಶ್ ಆಗಮಿಸಿ ಪೂಜೆ ಸಲ್ಲಿಸಿದರು. ಯಜಮಾನರಾದ ಟಿ.ಹೆಚ್.ಹನುಮಂತರಾಜು, ಟಿ.ಎಲ್.ಕುಂಭಯ್ಯ, ಎನ್.ಎಸ್.ಶಿವಣ್ಣ, ರವೀಶ್‌ಜಹಂಗೀರ್, ನಗರಪಾಲಿಕೆ ಮಾಜಿಉಪಮೇಯರ್ ಟಿ.ಕೆ.ನರಸಿಂಹಮೂರ್ತಿ, ಮಾಜಿ ಸದಸ್ಯ ಎ.ಶ್ರೀನಿವಾಸ್, ರಕ್ಷಿತ್, ಪಾತ್ರೆ ಚಂದ್ರಶೇಖರ್ ಮೊದಲಾದವರು ಭಾಗವಹಿಸಿದ್ದರು.**

# ಕಣ್ಣಿನ ಕಾಳಜಿ ಬಹುಮುಖ್ಯ : ಅಮ್ಜದ್ ಸಾಹುಕಾರ್



**ರಾಮನಗರ,ಜು.17:**

ಪ್ರಪಂಚದ ಸುಂದರತೆಯನ್ನು ನೋಡಿ ಆನಂದಿಸಬೇಕಾದರೆ ಕಣ್ಣನ್ನು ಜೋಪಾನವಾಗಿ ಇಟ್ಟುಕೊಳ್ಳಲು ಪ್ರತಿಯೊಬ್ಬರು ಮುಂದಾಗಬೇಕು. ಹೀಗಾಗಿ ಮನುಷ್ಯನ ಪ್ರಮುಖ ಅಂಗ ಕಣ್ಣಿನ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕಿದೆ ಎಂದು ಸಮಾಜ ಸೇವಕ ಹಾಗೂ ಎಂಎಂಯು ಎಜುಕೇಷನ್ ಟ್ರಸ್ಟ್‌ನ ಅಧ್ಯಕ್ಷ ಅಮ್ಜದ್ ಸಾಹುಕಾರ್ ಅಭಿಪ್ರಾಯಪಟ್ಟರು.

ನಗರದ ಸಾಯಿ ಮಂದಿರದ ಆವರಣದಲ್ಲಿ ಹಸನ್ಮುಖಿ ಚಾರಿಟಬಲ್ ಟ್ರಸ್ಟ್, ಕನಸು ಡ್ಯಾನ್ಸ್ ಅಕಾಡೆಮಿ, ಚುಟುಕು ಸಾಹಿತ್ಯ ಪರಿಷತ್ ಹಾಗೂ ಶ್ರದ್ಧಾ ಐ ಕೇರ್ ಟ್ರಸ್ಟ್‌ನ ಸಹಯೋಗದಲ್ಲಿ ನಡೆದ ಉಚಿತ ನೇತ್ರ ತಪಾಸಣಾ ಮತ್ತು ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಕಣ್ಣುಗಳನ್ನು ಕಾಲಕಾಲಕ್ಕೆ ತಪಾಸಣೆ ಮಾಡಿಕೊಳ್ಳುವ ಮೂಲಕ ಕಣ್ಣಿನ ಆರೋಗ್ಯ ಕಾಪಾಡಿಕೊಳ್ಳಬೇಕು. ಇಂದಿನ ಆಧುನಿಕ ಯುಗದಲ್ಲಿ ಬಹಳಷ್ಟು ಮಂದಿ ವೃದ್ಧರು ಕಣ್ಣಿನ ಪೊರೆಯಿಂದ ಬಳಲುತ್ತಿರುತ್ತಾರೆ. ಆರೋಗ್ಯದ ವಿಚಾರದಲ್ಲಿ ಜಾಗೃತಿ ಮೂಡಿಸಲು ಇಂತಹ ನೇತ್ರ ತಪಾಸಣಾ ಶಿಬಿರಗಳು ಸಹಕಾರಿಯಾಗಿವೆ ಎಂದರು.

ಚುಟುಕು ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ, ವಕೀಲ ಅಂಬರೀಶ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕಣ್ಣಿನ ಸಮಸ್ಯೆ ಗಂಭೀರ ಸ್ವರೂಪದ ಕಾಯಿಲೆಯಾಗಿ ಪರಿಣಮಿಸುತ್ತಿದೆ. ಆರಂಭದಲ್ಲೇ ತಪಾಸಣೆ ಮಾಡಿಸಿ, ಸಮಸ್ಯೆ ಕಂಡರೆ ಚಿಕಿತ್ಸೆ ಪಡೆಯಬೇಕಿದೆ. ಕಣ್ಣಿನ ವಿಷಯವಾಗಿ ಅಜಾಗರೂಕತೆ ತೋರದೆ ಕಾಲಕಾಲಕ್ಕೆ ತಪಾಸಣೆ ಮಾಡಿಸಿಕೊಳ್ಳಬೇಕು. ಕಣ್ಣಿನ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರಿದ್ದೆ ಆದಲ್ಲಿ ಬದುಕೆಲ್ಲಾ ಅಂಧಾಕಾರದಲ್ಲಿ ಕಳೆಯುವ ಅಪಾಯವಿದ್ದು, ಈ ಬಗ್ಗೆ ನಾವೆಲ್ಲರು ಜಾಗರೂಕರಾಗಿರಬೇಕೆಂದು ತಿಳಿಸಿದರು

ಸಾಹಿತ್ಯದ ಬಗ್ಗೆ ಆಸಕ್ತಿ ಮೂಡಿಸಲು ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಜಿಲ್ಲಾ ಮಟ್ಟದ ಸಮ್ಮೇಳನ ಆಯೋಜಿಸಲಾಗುತ್ತಿದೆ. ಚುಟುಕು ಕವಿಗಳು ಹೆಚ್ಚಿನ ಸಂಖ್ಯೆಯಲ್ಲಿ ಈ ಸಮ್ಮೇಳನದಲ್ಲಿ ಭಾಗಿಯಾಗಬೇಕು. ಜತೆಗೆ ಸದಸ್ಯತ್ವ ಸಹ ಪಡೆಯಬಹುದಾಗಿದ್ದು, ಸದಸ್ಯತ್ವ ನೋಂದಣಿ ಮಾಡಿಕೊಳ್ಳಲು ಯಾವುದೇ ಶುಲ್ಕ ಇರುವುದಿಲ್ಲ. ಸಾಹಿತ್ಯಾಸಕ್ತರು ಚುಟುಕು ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಪಡೆಯಬೇಕು ಎಂದು ಇದೇ ವೇಳೆ ಅಂಬರೀಶ್ ಮನವಿ ಮಾಡಿದರು.

ಉಚಿತ ನೇತ್ರ ತಪಾಸಣಾ ಶಿಬಿರದಲ್ಲಿ 100ಕ್ಕೂ ಹೆಚ್ಚು ಜನರಿಗೆ ನೇತ್ರ ಪರೀಕ್ಷೆ, ಹಲವರಿಗೆ ಐಒಎಲ್ ಅಳವಡಿಕೆ ಮಾಡಲಾಯಿತು. 10ಕ್ಕೂ ಹೆಚ್ಚು ಮಂದಿ ಕಣ್ಣಿನ ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾದರು. ರಕ್ತದೊತ್ತಡ ಹಾಗೂ ಸಕ್ಕರೆ ಕಾಯಿಲೆಯ ತಪಾಸಣೆ ಸಹ ನಡೆಸಲಾಯಿತು. ಈ ವೇಳೆ ಡಾ.ಹೇಮಂತ್ ಗೌಡ, ರಮೇಶ್ ಹೊಸದೊಡ್ಡಿ, ಯೋಗ ಗುರುಪ್ರಭು, ಅನಂತನಾಗ್ ಮತ್ತಿತರರು ಉಪಸ್ಥಿತರಿದ್ದರು.

# ಡಿಜಿಟಲ್ ಅರೆಸ್ಟ್: ಆತ್ಮಹತ್ಯೆಗೆ ಬೆಸ್ಕಾಂ ನೌಕರ ಶರಣು

**ರಾಮನಗರ,ಜು.17:**

ಸಿಬಿಐ ಅಧಿಕಾರಿ ಸೋಗಿನಲ್ಲಿ ಕರೆ ಮಾಡಿದ ಅಪರಿಚಿತ ವ್ಯಕ್ತಿಯಿಂದ ಡಿಜಿಟಲ್ ಅರೆಸ್ಟ್ ಮತ್ತು ಬ್ಲ್ಯಾಕ್ ಮೇಲ್‌ಗೆ ಒಳಗಾಗಿ ಸುಮಾರು 11 ಲಕ್ಷ ಕಳೆದುಕೊಂಡ ಬೆಸ್ಕಾಂನ 'ಡಿ' ಗ್ರೂಪ್ ನೌಕರರೊಬ್ಬರು, ಆತನ ಮಾನಸಿಕ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಚನ್ನಪಟ್ಟಣ ತಾಲ್ಲೂಕಿನ ಮಳೂರು ಹೋಬಳಿಯ ಕೆಲಗೇರಿಯ ಕುಮಾರ್ ಕೆ. (48) ಜೀವ ಕಳೆದುಕೊಂಡವರು. ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್‌ನಲ್ಲಿರುವ ಬೆಸ್ಕಾಂ ಕಚೇರಿಯಲ್ಲಿ ಕುಮಾರ್ ಅವರು ಗುತ್ತಿಗೆ ಆಧಾರದ ಮೇಲೆ ಕಸ ಗುಡಿಸುವ ಕೆಲಸ ಮಾಡುತ್ತಿದ್ದರು.

ಘಟನೆ ಕುರಿತು ಎಂ.ಕೆ. ದೊಡ್ಡಿ ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್ ಕಲಂ 108ರಡಿ (ಆತ್ಮಹತ್ಯೆಗೆ ಪ್ರಚೋದನೆ) ಜುಲೈ 15ರಂದು ಪ್ರಕರಣ ದಾಖಲಾಗಿದೆ. ತಮ್ಮ ತೋಟದಲ್ಲಿ ನೇಣಿಗೆ ಶರಣಾಗಿರುವ ಕುಮಾರ್, ತಮ್ಮ ಸಾವಿಗೆ ಸಿಬಿಐ ಅಧಿಕಾರಿ ಹೆಸರಿನಲ್ಲಿ ಕರೆ ಮಾಡಿದ ವ್ಯಕ್ತಿಯ ಕಾಟವೇ ಕಾರಣ ಎಂದು ಮರಣಪತ್ರ ಬರೆದಿಟ್ಟಿದ್ದಾರೆ.

**ವಾರೆಂಟ್ ಹೆಸರಲ್ಲಿ ಬೆದರಿಕೆ:** ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಸುಮಾರು 30 ವರ್ಷಗಳಿಂದ ಪತ್ನಿ ಮತ್ತು ಪುತ್ರನೊಂದಿಗೆ ಕುಮಾರ್ ನೆಲೆಸಿದ್ದರು. ಇತ್ತೀಚೆಗೆ ಅವರ ಮೊಬೈಲ್ ಸಂಖ್ಯೆಗೆ ಸಿಬಿಐ ಅಧಿಕಾರಿ ಹೆಸರಿನಲ್ಲಿ ವಿಕ್ರಂ ಗೋಸ್ವಾಮಿ ಎಂಬ ಅಪರಿಚಿತ ವ್ಯಕ್ತಿ ಕರೆ ಮಾಡಿದ್ದ. ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ, ನಿಮ್ಮ ವಿರುದ್ಧ ಬಂಧನ ವಾರೆಂಟ್ ಜಾರಿಯಾಗಿದೆ ಎಂದು ಹೆದರಿಸಿದ್ದ.

ಪ್ರಕರಣದಿಂದ ನಿಮ್ಮ ಹೆಸರು ಬಿಡಬೇಕಾದರೆ ನನ್ನ ಖಾತೆಗೆ 1.95 ಲಕ್ಷ ಪಾವತಿಸಬೇಕು ಎಂದು ಹೇಳಿದ್ದ. ಆತನ ಮಾತನ್ನು ನಿಜವೆಂದು ನಂಬಿ ಬೆದರಿದ್ದ ಕುಮಾರ್ ಹಣ ಪಾವತಿಸಿದ್ದರು. ಅಷ್ಟಕ್ಕೆ ಸುಮ್ಮನಾಗದ ಆತ ಈ ವಿಷಯವನ್ನು ಯಾರಿಗೂ ತಿಳಿಸದಂತೆ, ಕುಮಾರ್ ಅವರನ್ನು ಡಿಜಿಟಲ್ ಅರೆಸ್ಟ್ ಮಾಡಿ ಹಣಕ್ಕಾಗಿ ಮತ್ತೆ ಮತ್ತೆ ಬೇಡಿಕೆ ಇಡುತ್ತಿದ್ದ ಎಂದು ಪೊಲೀಸರು ತಿಳಿಸಿದರು.

**11 ಲಕ್ಷ ಕಿತ್ತಿದ್ದ:** ಪ್ರಕರಣದಿಂದ ಪಾರಾಗಲು ಕುಮಾರ್ ಅವರು ವಿವಿಧೆಡೆ ಸಾಲ ಮಾಡಿ ಸುಮಾರು 11 ಲಕ್ಷವನ್ನು ನಕಲಿ ಸಿಬಿಐ ಅಧಿಕಾರಿ ಹೇಳಿದ ಮೊಬೈಲ್ ಸಂಖ್ಯೆಗಳಿಗೆ ಆನ್‌ಲೈನ್ ಮೂಲಕ ವರ್ಗಾಯಿಸಿದ್ದರು. ಆದರೂ ಬಿಡದ ಆತ, ಮತ್ತೆ 2.75 ಲಕ್ಷ ವರ್ಗಾವಣೆ ಮಾಡು ಎಂದು ಕಾಟ ನೀಡುತ್ತಿದ್ದ. ಇಲ್ಲದಿದ್ದರೆ ನಿನ್ನನ್ನು ಅರೆಸ್ಟ್ ಮಾಡುತ್ತೇನೆ ಎಂದು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದ.

ಇಷ್ಟಾದರೂ ಕುಮಾರ್ ಅವರು ವಿಷಯವನ್ನು ಯಾರಿಗೂ ಹೇಳದೆ ಕಿರುಕುಳ ಅನುಭವಿಸುತ್ತಿದ್ದರು. ಜುಲೈ 14ರಂದು ಬೆಳಿಗ್ಗೆ ಕಾರ್ಯನಿಮಿತ್ತ ಊರಿಗೆ ಹೋಗಿ ಬರುವುದಾಗಿ ಪತ್ನಿ ಸಾವಿತ್ರಮ್ಮ ಅವರಿಗೆ ಕೆಲಗೇರಿಗೆ ಬಂದಿದ್ದರು. ಅಂದು ರಾತ್ರಿ 9.30ರ ಸುಮಾರಿಗೆ ಪತ್ನಿಗೆ ಕರೆ ಮಾಡಿ ಮಾತನಾಡಿದ್ದ ಅವರು, ರಾತ್ರಿಯೇ ತಮ್ಮ ಜಮೀನಲ್ಲಿರುವ ತೆಂಗಿನ ಮರಕ್ಕೆ ನೇಣು ಹಾಕಿಕೊಂಡಿದ್ದಾರೆ ಎಂದು ಪೊಲೀಸರು ಹೇಳಿದರು.

**ಪ್ರಕರಣ 'ಸೈಬರ್'ಗೆ ವರ್ಗ:** ಆತ್ಮಹತ್ಯೆಗೂ ಮುಂಚೆ ಮರಣಪತ್ರ ಬರೆದಿಟ್ಟಿರುವ ಕುಮಾರ್ ಅವರು, ಅದನ್ನು ತಮ್ಮ ಜೇಬಿನಲ್ಲಿಟ್ಟುಕೊಂಡಿದ್ದಾರೆ. ತಮ್ಮ ಸಾವಿಗೆ ಸಿಬಿಐ ಅಧಿಕಾರಿ ಹೆಸರಿನಲ್ಲಿ ಬ್ಲ್ಯಾಕ್ ಮೇಲ್ ಮಾಡಿರುವ ವ್ಯಕ್ತಿಯ ಕಾಟವೇ ಕಾರಣ ಎಂದು ಪತ್ರದಲ್ಲಿ ಬರೆದಿರುವ ಅವರು, ಆತನ ಹೆಸರು, ಮೊಬೈಲ್ ಸಂಖ್ಯೆ ಹಾಗೂ ತಾವು ಕಳಿಸಿದ್ದ ಹಣದ ಮಾಹಿತಿಯನ್ನು ಸಹ ಹಂಚಿಕೊಂಡಿದ್ದಾರೆ.

ಕುಮಾರ್ ಅವರ ಮೊಬೈಲ್ ಸಂಖ್ಯೆಗೆ ಉತ್ತರ ಪ್ರದೇಶ ಮತ್ತು ಹರಿಯಾಣದಿಂದ ಕರೆಗಳು ಬಂದಿರುವುದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ. ಇದು ಆನ್‌ಲೈನ್ ವಂಚನೆಯಾಗಿರುವುದರಿಂದ ಪ್ರಕರಣವನ್ನು ರಾಮನಗರದ ಸಿಇಎನ್ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.




## ಭೂ ಹಕ್ಕಿಗಾಗಿ ಪ್ರತಿಭಟನೆ ಇಂದು

**ಶಿವಮೊಗ್ಗ,ಜು.17:**

ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಜುಲೈ 18 ರಂದು ಬೆಳಿಗ್ಗೆ 11 ಗಂಟೆಗೆ ಇಲ್ಲಿನ ತಾಲೂಕು ಕಚೇರಿ ಮುಂಭಾಗದಲ್ಲಿ 'ದಲಿತರ ಭೂಮಿಯ ಹಕ್ಕಿಗಾಗಿ ಆಗ್ರಹಿಸಿ ಪ್ರತಿಭಟನೆ' ಹಮ್ಮಿಕೊಳ್ಳಲಾಗಿದೆ' ಎಂದು ತಾಲ್ಲೂಕು ಪ್ರಧಾನ ಸಂಚಾಲಕ ಎನ್.ಪರಮೇಶ್ವರಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಡುಬೂರು ರಾಜೇಂದ್ರ ನಿಧನಕ್ಕೆ ಸಂತಾಪ

**ಶಿವಮೊಗ್ಗ,ಜು.17:**

ಚಿಕ್ಕಮಗಳೂರು ಜೆಡಿಎಸ್ ಜಿಲ್ಲಾ ಘಟಕ ಮಾಜಿ ಅಧ್ಯಕ್ಷ ಮಡುಬೂರು ರಾಜೇಂದ್ರ ಅವರು ಇತ್ತೀಚೆಗೆ ನಿಧನರಾದರು. ಇಲ್ಲಿನ ಜೆಡಿಎಸ್ ಕಚೇರಿಯಲ್ಲಿ ಜಿಲ್ಲಾ ಜನತಾದಳ (ಜಾತ್ಯತೀತ) ಜಿಲ್ಲಾ ಘಟಕ ಅಧ್ಯಕ್ಷ ಕಡಿದಾಳ ಗೋಪಾಲ್ ಅವರ ನೇತೃತ್ವದಲ್ಲಿ ಶ್ರದ್ಧಾಂಜಲಿ ಸಭೆ ನಡೆಸಲಾಯಿತು.

ಜಿಲ್ಲಾ ಘಟಕ ಅಧ್ಯಕ್ಷ ಕಡಿದಾಳ್ ಗೋಪಾಲ್ ಮಾತನಾಡಿ, ರಾಜೇಂದ್ರ ಅವರ ನಿಧನದಿಂದ ಪಕ್ಷಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದರು.

ಜಿಲ್ಲಾ ಘಟಕ ಕಾರ್ಯಾಧ್ಯಕ್ಷ ಕೆ.ಎನ್.ರಾಮಕೃಷ್ಣ ಮಾತನಾಡಿ,'ರಾಜೇಂದ್ರ ಅವರು ಪ್ರಮಾಣಿಕ ರಾಜಕಾರಣಿ ಆಗಿದ್ದು, ಕ್ಷೇತ್ರದ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸುವ ಗುಣ ಹೊಂದಿದ್ದರು ಎಂದರು.

ಸಭೆಯಲ್ಲಿ ಮಹಾ ಪ್ರಧಾನ ಕಾರ್ಯದರ್ಶಿ ಎಚ್.ಆರ್. ತ್ಯಾಗರಾಜ್, ನಗರ ಘಟಕ ಅಧ್ಯಕ್ಷ ದೀಪಕ್ ಸಿಂಗ್, ಪ್ರಧಾನ ಕಾರ್ಯದರ್ಶಿಗಳಾದ ಎಚ್.ಎಂ.ಸಂಗಯ್ಯ, ರಮೇಶ್ ಬಿ.ನಾಯಕ್, ಕೆ.ಎಂ.ನಾಗೇಶ್, ಗೋಪಿ ಮೊದಲಿಯಾರ್ ಹಾಗೂ ಪಕ್ಷದ ಮುಖಂಡರು ಇದ್ದರು.

## ಮೇ 21 :ಡಿಸಿಗೆ ಮನವಿ

**ಶಿವಮೊಗ್ಗ,ಜು.17:**

ಸರ್ಕಾರಿ ನಿವೃತ್ತ ನೌಕರರಿಗೆ ಪಿಂಚಣಿ ಪುರಸ್ಕರಿಸುವುದು ಕಷ್ಟ ಸಾಧ್ಯ ಹಾಗೂ ಮುಂದಿನ ತುಟ್ಟಿ ಭತ್ಯೆ ಮಂಜೂರಾತಿ ನೀಡಲು ಸಾಧ್ಯವಿಲ್ಲ ಎಂದು ವೇತನ ಆಯೋಗ ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಆದ್ದರಿಂದ, ನಿವೃತ್ತ ನೌಕರರಿಗೆ ಪಿಂಚಣಿ ಸೌಲಭ್ಯ ಹಾಗೂ ಭತ್ಯೆಯನ್ನು ಮುಂದುವರೆಸುವಂತೆ ಜಿಲ್ಲಾ ಸರ್ಕಾರಿ ನೌಕರರ ಸಂಘದಿಂದ ಮೇ 21 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಮೂಲಕ ಪ್ರಧಾನ ಮಂತ್ರಿ ಅವರಿಗೆ ಮನವಿ ಸಲ್ಲಿಸಲಾಗುವುದು ಎಂದು ಸಂಘದ ಅಧ್ಯಕ್ಷರು ತಿಳಿಸಿದ್ದಾರೆ.

## ಜು. 22: ರಸ ಪ್ರಶ್ನೆ-ಪ್ರಬಂಧ ಸ್ಪರ್ಧೆ

**ಭದ್ರಾವತಿ,ಜು.17:**

ನಾಡ ಪ್ರಭು ಕೆಂಪೇಗೌಡರ 516 ನೇ ಜಯಂತಿ ಅಂಗವಾಗಿ ನ್ಯೂಟೌನ್ ಆದಿಚುಂಚನಗಿರಿ ವಿದ್ಯಾ ಸಂಸ್ಥೆಯಲ್ಲಿ ಜು: 22 ರಂದು ಮಂಗಳವಾರ ಬೆಳಗ್ಗೆ 10.30 ಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಆದೇಶದಂತೆ ರಸ ಪ್ರಶ್ನೆ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಆಶುಭಾಷಣ ಸ್ಪರ್ಧೆ ಮತ್ತು ಚಿತ್ರ ಕಲೆ ನಡೆಯಲಿದೆ.

ರಾಜ್ಯ ಸರಕಾರದ ಆದೇಶದಂತೆ ಶಾಲಾ ಕಾಲೇಜುಗಳಲ್ಲಿ ಕೆಂಪೇಗೌಡರ ಜಯಂತಿ ಅಂಗವಾಗಿ ವಿದ್ಯಾರ್ಥಿಗಳಿಂದ ವಿವಿಧ ಸ್ಪರ್ಧೆಗಳನ್ನು ಆಯೋಜಿಸಿಸಲು ಆದೇಶ ಮಾಡಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಸೂಚನೆಯಂತೆ ಸ್ಪರ್ಧೆಗಳನ್ನು ಆಯೋಜಿಸಿಲಾಗಿದೆ. ತಾಲೂಕಿನ ಎಲ್ಲಾ ವಿದ್ಯಾ ಸಂಸ್ಥೆಗಳು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಬಿಇಒ ಎ.ಕೆ.ನಾಗೇಂದ್ರಪ್ಪ ತಿಳಿಸಿದ್ದಾರೆ.

## ಇಂದು ಭಾವಗೀತೆ ಗಾಯನ

**ಭದ್ರಾವತಿ,ಜು.17:**

ಹಳೇನಗರದ ಶ್ರೀ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ಜು: 18 ರಂದು ಶುಕ್ರವಾರ ಸಂಜೆ 4.30 ಗಂಟೆಗೆ ಕವಿ ಸಾಹಿತಿ ದಿ: ಹೆಚ್.ಎಸ್. ವೆಂಕಟೇಶ್‌ಮೂರ್ತಿ ರವರ ಸ್ಮರಣಾರ್ಥ ಗೀತ ಗಾಯನ ಕಾರ್ಯಕ್ರಮವನ್ನು ಕನ್ನಡ ಸಾಹಿತ್ಯ ಪರಿಷತ್ ಹಮ್ಮಿಕೊಂಡಿದೆ.

ಜಿಲ್ಲಾ ಕಸಾಪ ಅಧ್ಯಕ್ಷ ಡಿ.ಮಂಜುನಾಥ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ತಾಲೂಕು ಕಸಾಪ ಅಧ್ಯಕ್ಷ ಹೆಚ್.ತಿಮ್ಮಪ್ಪ ಅಧ್ಯಕ್ಷತೆ ವಹಿಸುವರು. ನಿವೃತ್ತ ಪ್ರಾಂಶುಪಾಲ ಡಾ: ಕೆ.ನಿತ್ಯಾನಂದ ಉಪನ್ಯಾಸ ನೀಡುವರು. ಜನ್ನಾಪುರದ ಸಂಗೀತ ಶಿಕ್ಷಕಿ ಗಾಯತ್ರಿ, ಕನ್ನಡ ಸಾಹಿತ್ಯ ಸಾಂಸ್ಕೃತಿಕ ವೇದಿಕೆ ಅಧ್ಯಕ್ಷೆ ಎಂ.ಎಸ್.ಸುಧಾಮಣಿ, ಕನ್ನಡ ಜಾನಪದ ಪರಿಷತ್ ಅಧ್ಯಕ್ಷ ಎಂ.ಆರ್.ರೇವಣಪ್ಪ ವೇದಿಕೆಯಲ್ಲಿ ಉಪಸ್ಥಿತರಿರುವರು. ಅಭಿಮಾನಿಗಳು ಸಕಾಲಕ್ಕೆ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಗೌರವ ಕಾರ್ಯದರ್ಶಿ ಡಿ.ನಾಗೋಜಿರಾವ್ ತಿಳಿಸಿದ್ದಾರೆ.

## ಕೆಎಸ್‌ಓಯು ಪ್ರವೇಶ ಆರಂಭ

ಶಿವಮೊಗ್ಗ,ಜು.17 : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಶಿವಮೊಗ್ಗ ಪ್ರಾದೇಶಿಕ ಕೇಂದ್ರದಲ್ಲಿ 2025-26 ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯಲ್ಲಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಈಗಾಗಲೇ ಆರಂಭವಾಗಿದ್ದು ಆಲ್ಕೊಳ ವೃತ್ತ, ಸಾಗರ ರಸ್ತೆಯಲ್ಲಿರುವ ಕರಾಮುವಿ ಪ್ರಾದೇಶಿಕ ಕಚೇರಿ, ಶಿವಮೊಗ್ಗ ಇಲ್ಲಿ ಪ್ರವೇಶಾತಿ ಪಡೆಯಬಹುದು.

# ಲಂಚ : ಮುದ್ದಿನಕೊಪ್ಪ ಗ್ರಾಪಂ ಕಾರ್ಯದರ್ಶಿ ಸೆರೆ

**ಶಿವಮೊಗ್ಗ, ಜು. 17 :**

ಇ-ಸ್ವತ್ತು ಮಾಡಿಕೊಡಲು 3,000 ಲಂಚಕ್ಕೆ ಬೇಡಿಕೆ ಇಟ್ಟಿದ್ದ ಶಿವಮೊಗ್ಗ ತಾಲ್ಲೂಕು, ಮುದ್ದಿನಕೊಪ್ಪ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿ ಕುಮಾರ್ ನಾಯ್ಕ್ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾರೆ. ದೂರುದಾರ ನೀಡಿದ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡಿದ್ದ ಲೋಕಾಯುಕ್ತ ಪೊಲೀಸರು ಟ್ರ್ಯಾಪ್ ಮಾಡಿ ಅಧಿಕಾರಿಯನ್ನು ಬಲೆಗೆ ಬೀಳಿಸಿದ್ದಾರೆ.

ರಾಮಪುರ ಗ್ರಾಮದ ವಿನೋದ್ ಬಿ. ಎಂಬುವವರು ಅಧಿಕಾರಿಯು ಲಂಚ ಕೇಳುತ್ತಿರುವ ಬಗ್ಗೆ ಶಿವಮೊಗ್ಗ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಅವರು ತಮ್ಮ ದೂರಿನಲ್ಲಿ, ಅವರ ತಾಯಿ ಹೆಸರಿನಲ್ಲಿರುವ 30X0 ಅಡಿ ಅಳತೆಯ ಸೈಟಿನಲ್ಲಿ ನಿರ್ಮಿಸಿರುವ 23X8 ಅಡಿ ಮನೆಯ ಇ-ಸ್ವತ್ತು ಮಾಡಿಸಲು ಮುದ್ದಿನಕೊಪ್ಪ ಗ್ರಾಮ ಪಂಚಾಯಿತಿ ಕಚೇರಿಗೆ ಅರ್ಜಿ ಸಲ್ಲಿಸಿದ್ದರು. ಈ ಬಗ್ಗೆ ಕಾರ್ಯದರ್ಶಿ ಕುಮಾರ್ ನಾಯ್ಕ್ ಅವರನ್ನು ಹಲವು ಬಾರಿ ಸಂಪರ್ಕಿಸಿದಾಗ, ಅವರು ಕೆಲಸ ಮಾಡಿಕೊಡದೆ ಸತಾಯಿಸುತ್ತಿದ್ದರು ಎಂದು ಆರೋಪಿಸಿದ್ದಾರೆ.



ಕೊನೆಯಲ್ಲಿ ಕುಮಾರ್ ನಾಯ್ಕ್ ಈ ವಿಚಾರದಲ್ಲಿ 3,000 ಲಂಚ ನೀಡುವಂತೆ ಡಿಮ್ಯಾಂಡ್ ಮಾಡಿದ್ದು, ಹಣ ಕೇಳಿದ್ದರ ವಾಯ್ಸ್ ರೆಕಾರ್ಡ್ ನ್ನು ಲೋಕಾಯುಕ್ತ ಅಧಿಕಾರಿಗಳಿಗೆ ನೀಡಿ ದೂರು ದಾಖಲಿಸಿದ್ದರು. ಇವರ ದೂರನ್ನು ಆಧರಿಸಿ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ -1988 (ತಿದ್ದುಪಡಿ ಕಾಯ್ದೆ-2018) ಕಲಂ 7(3) ಕೇಸ್ ದಾಖಲಿಸಿದ್ದ ಅಧಿಕಾರಿಗಳು ಆರೋಪಿತ ಅಧಿಕಾರಿಯನ್ನು ಟ್ರ್ಯಾಪ್ ಮಾಡಿದೆ. ಮುದ್ದಿನಕೊಪ್ಪ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಕೊಠಡಿಯಲ್ಲಿ ಗುರುವಾರ ಕುಮಾರ್ ನಾಯ್ಕ್ 3,000 ಲಂಚದ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸರು ಅಧಿಕಾರಿಯನ್ನು ವಶಕ್ಕೆ ಪಡೆದಿದ್ದಾರೆ. ಪ್ರಕರಣ ಸಂಬಂಧ ಶಿವಮೊಗ್ಗ ಲೋಕಾಯುಕ್ತ ಪೊಲೀಸ್ ಠಾಣೆಯ ಪಿಐ ಗುರುರಾಜ್ ಎನ್. ಮೈಲಾರ ತನಿಖೆ ನಡೆಸುತ್ತಿದ್ದಾರೆ.

ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್ ರುದ್ರೇಶ್ ಕೆ.ಪಿ., ಹಾಗೂ ಪೊಲೀಸ್ ಸಿಬ್ಬಂದಿಗಳಾದ ಯೋಗೇಶ್ ಟೀಕಪ್ಪ, ಸುರೇಂದ್ರ ಮಂಜುನಾಥ್., ಬಿ.ಟಿ. ಚನ್ನೇಶ್, ದೇವರಾಜ್, ಪ್ರಕಾಶ್ ಬಾರಿದಮರ, ಅರುಣ್‌ಕುಮಾರ್, ಅಂಜಲಿ, ಚಂದ್ರಿಬಾಯಿ, ಗೋಪಿ, ಪ್ರದೀಪ್, ಜಯಂತ್ ಪಾಲ್ಗೊಂಡಿದ್ದರು.

## ಸಿಗಂದೂರು ದೇವಸ್ಥಾನಕ್ಕೆ ಹೆಚ್ಚುವರಿ ಕೆಎಸ್‌ಆರ್‌ಟಿಸಿ ಬಸ್



**ಶಿವಮೊಗ್ಗ,ಜು.17:**

ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಸಾಗರದ ಅಂಬರಗೋಡ್ಲು ಮತ್ತು ಕಳಸವಳ್ಳಿ ಗ್ರಾಮವನ್ನು ಸಂಪರ್ಕಿಸುವ ಶರಾವತಿ ಹಿನ್ನೀರಿನಲ್ಲಿ ನಿರ್ಮಿಸಲಾದ ಭಾರತದ ಎರಡನೇ ಅತಿದೊಡ್ಡ ಕೇಬಲ್-ಸ್ಟೇಡ್ ಸೇತುವೆಯನ್ನು ಉದ್ಘಾಟಿಸಿದ ನಂತರ, ಪ್ರಸಿದ್ಧ ಧಾರ್ಮಿಕ ಸ್ಥಳವಾದ ಸಿಗಂದೂರಿಗೆ ತಲುಪಲು ಸೇತುವೆಯನ್ನು ಬಳಸುವ ವಾಹನಗಳ ಸಂಖ್ಯೆ ಹೆಚ್ಚಾಗಿದೆ.

ಕೆಎಸ್‌ಆರ್‌ಟಿಸಿಯ ಶಿವಮೊಗ್ಗ ವಿಭಾಗವು ಈಗ ಹೆಚ್ಚುವರಿ ಬಸ್ ಸೇವೆಗಳನ್ನು ಯೋಜಿಸುತ್ತಿದೆ. ಈ ಹಿಂದೆ, ಚೌಡೇಶ್ವರಿ ದೇವಸ್ಥಾನ ಇರುವ ಸಿಗಂದೂರಿಗೆ ಕೇವಲ ಮೂರು ಬಸ್‌ಗಳು ಮಾತ್ರ ಕಾರ್ಯನಿರ್ವಹಿಸುತ್ತಿದ್ದವು, ವರ್ಷವಿಡೀ ಲಕ್ಷಾಂತರ ಭಕ್ತರನ್ನು ಆಕರ್ಷಿಸುತ್ತಿದ್ದವು. ಇಲ್ಲಿಯವರೆಗೆ, ಬೆಳಿಗ್ಗೆ ಬಸ್ ಸೇವೆ ಲಭ್ಯವಿತ್ತು, ಅದು ಭಕ್ತರನ್ನು ಲಾಂಚ್‌ನಲ್ಲಿ ಶರಾವತಿ ನದಿಯನ್ನು ದಾಟಿದ ನಂತರ ಸಿಗಂದೂರಿಗೆ ಕರೆದೊಯ್ಯುತ್ತಿತ್ತು ಮತ್ತು ಸಂಜೆ ಹಿಂತಿರುಗಿಸುತಿತ್ತು.

ಕೆಎಸ್‌ಆರ್‌ಟಿಸಿ ಸಾಗರ ಪಟ್ಟಣದಿಂದ ಎರಡು ಬಸ್‌ಗಳನ್ನು ಓಡಿಸಿದೆ. ಕೆಎಸ್‌ಆರ್‌ಟಿಸಿಯ ಶಿವಮೊಗ್ಗ ವಿಭಾಗೀಯ ನಿಯಂತ್ರಕ ಟಿ.ಆರ್. ನವೀನ್ ಅವರ ಪ್ರಕಾರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ವಿಭಾಗಗಳಿಂದ ತಲಾ ಒಂದು ಬಸ್‌ನೊಂದಿಗೆ ಇತರ ವಿಭಾಗಗಳಿಂದ ಹೆಚ್ಚುವರಿ ಕೆಎಸ್‌ಆರ್‌ಟಿಸಿ ಸೇವೆಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ.

ಕರೂರು-ಬಾರಂಗಿ ನಿವಾಸಿಗಳು ಈ ಹಿಂದೆ ಖಾಸಗಿ ಸಾರಿಗೆ ಮತ್ತು ವೈಯಕ್ತಿಕ ವಾಹನಗಳನ್ನು ಅವಲಂಬಿಸಿದ್ದರು. ಹೊಸದಾಗಿ ನಿರ್ಮಿಸಲಾದ ಸೇತುವೆಯು ಕೆಎಸ್‌ಆರ್‌ಟಿಸಿ ತನ್ನ ಸೇವೆಗಳನ್ನು ವಿಸ್ತರಿಸಲು ಅನುವು ಮಾಡಿಕೊಟ್ಟಿತು. ಕೆಎಸ್‌ಆರ್‌ಟಿಸಿಯ ಸಾಗರ ಡಿಪೋ ವ್ಯವಸ್ಥಾಪಕ ಶ್ರೀಶೈಲ ಬಿರಾದಾರ್ ಶೀಘ್ರದಲ್ಲೇ ಪ್ರಾರಂಭವಾಗಲಿರುವ ಹೊಸ ಮಾರ್ಗಕ್ಕೆ ಅನುಮೋದನೆಯನ್ನು ದೃಢಪಡಿಸಿದರು.

ಈ ಹೊಸ ಮಾರ್ಗವು ದಿನವಿಡೀ ಸೇವೆಯೊಂದಿಗೆ ಹೆಚ್ಚುವರಿ ಹಳ್ಳಿಗಳನ್ನು ಸೇರಿಸುತ್ತದೆ. ಬಸ್ ಸೇವೆಗೆ ಅನುಗುಣವಾಗಿ ದೇವಾಲಯದ ಬಳಿ ಪಾರ್ಕಿಂಗ್ ವ್ಯವಸ್ಥೆಯೂ ಹೆಚ್ಚಿಸಬೇಕಿದೆ ಎಂದಿದ್ದಾರೆ.

## ಉಂಬ್ಳೇಬೈಲು ಗಸ್ತು ಅರಣ್ಯ ಪಾಲಕ ಸಲೀಮ್ ಗೆ ಮುಖ್ಯಮಂತ್ರಿ ಪದಕ



**ಶಿವಮೊಗ್ಗ,ಜು.17:**

ಅರಣ್ಯ ಇಲಾಖೆಯಲ್ಲಿ ಅತ್ಯುತ್ತಮ ಸಾಧನೆಗೈದ ಗಸ್ತು ಅರಣ್ಯ ಪಾಲಕ (ಅರಣ್ಯ ರಕ್ಷಕ) ಸಲೀಮ್ ಎಂ. ಅವರಿಗೆ 2024 ನೇ ಸಾಲಿನ ಮುಖ್ಯಮಂತ್ರಿ ಪದಕಕ್ಕೆ ಆಯ್ಕೆಯಾಗಿದ್ದಾರೆ.

ಅರಣ್ಯ ಇಲಾಖೆಯಲ್ಲಿ ವನ್ಯಜೀವಿ ಸಂರಕ್ಷಣೆ,ಅರಣ್ಯ ಒತ್ತುವರಿ ತೆರವು, ವನ್ಯಜೀವಿ ಅಪರಾಧಗಳ ತಡೆ ಮತ್ತು ವಶಕ್ಕೆ ತೆಗೆದುಕೆ ಳ್ಳುವುದ'ಂ, ಕ್ರೀಡಾಕೂಟದ'ಲ್ಲಿ ಸಾಧನೆಗೈದ,ಅರಣ್ಯಕ್ಕೆ ಸಂಬಂಧಿಸಿದಂತೆ ಕೆಲಸಗಳಲ್ಲಿ ಶೌರ್ಯ ಮತ್ತು ದಿಟ್ಟತನ ತೋರಿದ ಅಧಿಕಾರಿ, ಸಿಬ್ಬಂದಿಗಳಿಗೆ 2024 ನೇ ಸಾಲಿನ ಮುಖ್ಯಮಂತ್ರಿ ಪದಕ ಮಾಡಲಾಗುತ್ತದೆ.

ಶೌರ್ಯ ಮತ್ತು ದಿಟ್ಟತನ,ಅರಣ್ಯ ಅಭಿವೃದ್ಧಿಯಲ್ಲಿ ಮಹತ್ತರ ಕೆಲಸ ಮಾಡಿರುವ ಗಸ್ತು ಅರಣ್ಯ ಪಾಲಕ ಅರಣ್ಯ ರಕ್ಷಕ) ಸಲೀಮ್ ಎಂ ಅವರಿಗೆ 2024 ನೇ ಸಾಲಿನ ಮುಖ್ಯಮಂತ್ರಿ ಪದಕಕ್ಕೆ ಆಯ್ಕೆಯಾಗಿದ್ದಾರೆ. 2015ರಲ್ಲಿ ಇಲಾಖೆಗೆ ನೇಮಕವಾದ ಇವರು ಈ ಹಿಂದೆ ಶಿವಮೊಗ್ಗ ವನ್ಯಜೀವಿ ವಲಯ ಹಾಗೂ ಕೋಗಾರು ವನ್ಯ ಜೀವಿ ವಲಯದಲ್ಲಿ ಕಾರ್ಯ ನಿರ್ವಹಿಸಿದ್ದಾರೆ. ಪ್ರಸ್ತುತ ಉಂಬಳೇಬೈಲು ವಲಯದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.


## ಕನಸು ಜ್ಞಾನವಿಕಾಸ ಕೇಂದ್ರದ ವಾರ್ಷಿಕೋತ್ಸವ



**ಶಿವಮೊಗ್ಗ ,ಜು.17:**

ನಗರ ವಲಯದ ಲಷ್ಕರ್ ಮೊಹಲ್ಲಾ ಕಾರ್ಯಕ್ಷೇತ್ರದ ಕನಸು ಜ್ಞಾನವಿಕಾಸ ಕೇಂದ್ರದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಇತ್ತೀಚೆಗೆ ಆಯೋಜಿಸಲಾಗಿತ್ತು. ಅಧ್ಯಕ್ಷತೆಯನ್ನು ಜ್ಞಾನವಿಕಾಸ ಕೇಂದ್ರದ ಸದಸ್ಯೆ ಶಾರದಮ್ಮ ವಹಿಸಿದ್ದರು. ಉದ್ಘಾಟಕರಾಗಿ ಮಾಜಿ ಮಹಾನಗರ ಪಾಲಿಕೆ ಸದಸ್ಯೆ ರೇಖಾ ಚಂದ್ರಶೇಖರ್ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದರು. ಮುಖ್ಯ ಅತಿಥಿಗಳಾಗಿದ್ದ ತಾಲೂಕಿನ ಯೋಜನಾಧಿಕಾರಿ ಪುರಂದರ ಪೂಜಾರಿ ಜ್ಞಾನವಿಕಾಸ ಕಾರ್ಯಕ್ರಮದ ಮಹತ್ವಗಳ ಕುರಿತು ಮಾಹಿತಿ ನೀಡಿದರು. ಸಂಪನ್ಮೂಲ ವ್ಯಕ್ತಿ ಸೌಮ್ಯ ಸ್ವಾವಲಂಬಿ ಬದುಕಿನತ್ತ ಮಹಿಳೆಯ ಪಯಣದ ಕುರಿತು ಮಾಹಿತಿ ನೀಡಿದರು. ನಗರ ವಲಯದ ಮೇಲ್ವಿಚಾರಕ ಸುನಿಲ್, ಸಮನ್ವಯ ಅಧಿಕಾರಿ ಚೇತನಾ, ಸೇವಾ ಪ್ರತಿನಿಧಿ ಜಯಲಕ್ಷ್ಮಿ ಉಪಸ್ಥಿತರಿದ್ದರು.

## ಜಂಗಲ್ ಮಂಗಲ್ ಚಿತ್ರಕ್ಕೆ ತೇಜಸ್ವಿ ಕಥೆಗಳೇ ಸ್ಫೂರ್ತಿ : ನಿರ್ದೇಶಕ ರಕ್ಷಿತ್



ಶಿವಮೊಗ್ಗ: ಯಶ್ ಶೆಟ್ಟಿ ನಟಿಸಿ, ರಕ್ಷಿತ್ ನಿರ್ದೇಶನದ ಜಂಗಲ್ ಮಂಗಲ್ ಚಲನ ಚಿತ್ರವು ಜುಲೈ 4 ರಂದು ರಾಜ್ಯಾದ್ಯಂತ ಬಿಡುಗಡೆಯಾಗಿ ಉತ್ತಮ ಪ್ರದರ್ಶನ ಕಾಣುತ್ತಿದೆ. ಈ ಹಿನ್ನೆಲೆಯಲ್ಲಿ ಗುರುವಾರ ಶಿವಮೊಗ್ಗಕ್ಕೆ ಆಗಮಿಸಿದ ಚಿತ್ರತಂಡ, ಚಿತ್ರ ನಿರ್ಮಾಣದ ಕುರಿತು ಮಾಹಿತಿಗಳನ್ನು ಹಂಚಿಕೊಂಡಿದೆ.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ನಿರ್ದೇಶಕ ರಕ್ಷಿತ್, ತಾನು ಪೂರ್ಣಚಂದ್ರ ತೇಜಸ್ವಿಯವರ ಕಥೆ-ಕಾದಂಬರಿಗಳನ್ನು ಓದುತ್ತಾ ಬೆಳೆದವನು ಎಂದು ತಿಳಿಸಿದರು. ತೇಜಸ್ವಿಯವರು ಕಥೆಯನ್ನು ಹೆಣೆಯುವ ರೀತಿ ನನಗೆ ಬಹಳ ಇಷ್ಟ. ನಮ್ಮ ಸುತ್ತಮುತ್ತ ನಡೆಯುವ ಕಥೆಯನ್ನು ಬರಹದ ಮೂಲಕ ಅಥವಾ ಚಿತ್ರದ ಮೂಲಕ ಜನರಿಗೆ ತಲುಪಿಸಿದಾಗ ಅದು ಹೆಚ್ಚು ಜನರನ್ನು ತಲುಪುತ್ತದೆ. ನಾನು 'ಜಂಗಲ್ ಮಂಗಲ್ ಚಿತ್ರವನ್ನು ಇದೇ ರೀತಿ ತಯಾರಿಸಿದ್ದೇನೆ'' ಎಂದು ಹೇಳಿದರು.

ಸುಮಾರು ಒಂದೂವರೆ ಗಂಟೆ ಅವಧಿಯ ಈ ಚಿತ್ರದಲ್ಲಿ ಯಾವುದೇ ಹಾಡುಗಳಿಲ್ಲ. ಚಿತ್ರವನ್ನು ನೋಡುತ್ತಾ ನೋಡುತ್ತಾ ಪ್ರೇಕ್ಷಕರು ಕಥೆಯೊಂದಿಗೆ ಬೆರೆತುಹೋಗುವಂತೆ ಭಾಸವಾಗುತ್ತದೆ ಎಂದು ರಕ್ಷಿತ್ ವಿವರಿಸಿದರು. ಇದು ತಮ್ಮ ಮೊದಲ ನಿರ್ದೇಶನದ ಚಿತ್ರವಾಗಿದ್ದು, ಪ್ರೇಕ್ಷಕರು ಚಿತ್ರವನ್ನು ಬೆಂಬಲಿಸುವಂತೆ ಮನವಿ ಮಾಡಿದರು. ಚಿತ್ರದ ನಾಯಕಿ ಹರ್ಷಿತಾ ರಾಮಚಂದ್ರ ಮಾತನಾಡಿ, ತಾವು ಈ ಚಿತ್ರದಲ್ಲಿ ದಿವ್ಯಾ ಎಂಬ ಅಂಗನವಾಡಿ ಶಿಕ್ಷಕಿಯ ಪಾತ್ರವನ್ನು ನಿರ್ವಹಿಸಿರುವುದಾಗಿ ತಿಳಿಸಿದರು. ಈ ಹಿಂದೆ ಧಾರಾವಾಹಿಗಳಲ್ಲಿ ನಟಿಸಿದ್ದ ತಾನು, ಇದೇ ಮೊದಲ ಬಾರಿಗೆ ಚಿತ್ರವೊಂದರಲ್ಲಿ ನಾಯಕಿಯಾಗಿ ನಟಿಸಿದ್ದೇನೆ, ನಮ್ಮ ಚಿತ್ರ ಇದೀಗ ಎರಡನೇ ವಾರಕ್ಕೆ ಕಾಲಿಟ್ಟಿದ್ದು, ಇಂತಹ ಉತ್ತಮ ಚಿತ್ರಗಳು ಇನ್ನೂ ಹೆಚ್ಚಿನ ಜನರನ್ನು ತಲುಪಬೇಕು ಎಂಬುದು ನಮ್ಮ ಆಶಯ'' ಎಂದರು.

ನಟ ಉಗ್ರಂ ಮಂಜು ಮಾತನಾಡಿ, ''ಬೇರೆ ಭಾಷೆಯ ಚಿತ್ರಗಳು ಇಲ್ಲಿ ಬಿಡುಗಡೆಯಾದಾಗ, ನಮ್ಮಲ್ಲಿ ಏಕೆ ಇಂತಹ ಚಿತ್ರಗಳು ಬಿಡುಗಡೆಯಾಗುತ್ತಿಲ್ಲ ಎಂಬ ಮಾತುಗಳು ಪ್ರೇಕ್ಷಕರಲ್ಲಿ ಕೇಳಿ ಬರುತ್ತಿದ್ದವು. ಆದರೆ, ನಮ್ಮ ಕನ್ನಡದಲ್ಲಿಯೂ ಸಹ ಅಂತಹ ಹಲವಾರು ಚಿತ್ರಗಳು ಬಿಡುಗಡೆಯಾಗಿವೆ. ಅದರಲ್ಲಿ ನಮ್ಮ 'ಜಂಗಲ್ ಮಂಗಲ್' ಚಿತ್ರವೂ ಒಂದು. ಪರಿಸರವನ್ನು ಹಿನ್ನೆಲೆಯಾಗಿಟ್ಟುಕೊಂಡು, ನಿರ್ದೇಶಕರು ಹೊಸ ರೀತಿಯ ಕಥೆಯನ್ನು ಹೆಣೆದಿದ್ದಾರೆ, ತಾವು ಈ ಸಿನಿಮಾದಲ್ಲಿ 'ಬಾಬು' ಎಂಬ ನೆಗೆಟಿವ್ ಪಾತ್ರ ಮಾಡಿದ್ದು, ಈ ಸಿನಿಮಾ ನಿಜ ಜೀವನದಲ್ಲಿ ನಡೆಯುತ್ತಿರುವ ಕಥೆಗಳಿಗೆ ಬಹಳ ಹತ್ತಿರವಾಗಿದೆ ಎಂದು ಅವರು ಹೇಳಿದರು.

## ಜು. 20: ಪ್ರೊಟೆಕ್ಷನ್ ಫಾರ್ ಸಿವಿಲ್ ರೈಟ್ಸ್ ಶಾಖೆ ಉದ್ಘಾಟನೆ



**ಶಿವಮೊಗ್ಗ,ಜು.17:**

ಅಸೋಸಿಯೇಷನ್ ಫಾರ್ ಪ್ರೊಟೆಕ್ಷನ್ ಆಫ್ ಸಿವಿಲ್ ರೈಟ್ಸ್ ( ಎಪಿಸಿಆರ್) ಒಂದು ರಾಷ್ಟ್ರೀಯ ಮಟ್ಟದ ಸಂಸ್ಥೆಯಾಗಿದ್ದು, ಇದರ ಜಿಲ್ಲಾ ಶಾಖೆಯನ್ನು ಜುಲೈ 20ರಂದು ಶಿವಮೊಗ್ಗದಲ್ಲಿ ಉದ್ಘಾಟಿಸಲಾಗುವುದು.

ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಸಂಸ್ಥೆಯ ಜಿಲ್ಲಾ ಸಂಚಾಲಕ ಆರ್ ಟಿ ನಟರಾಜ, ದಿಲ್ಲಿ ಸೊಸೈಟಿ ನೋಂದಣಿ ಕಾಯ್ದೆ ಅಡಿಯಲ್ಲಿ ಕಾನೂನಿನಂತೆ ನೋಂದಾಯಿತವಾಗಿದೆ.

ಇದಕ್ಕೆ 18ಕ್ಕೂ ಹೆಚ್ಚು ರಾಜ್ಯಗಳಲ್ಲಿ ಚಾಪ್ಟರ್‌ಗಳು ಇದ್ದು, ಪ್ರತಿ ರಾಜ್ಯದಲ್ಲೂ ಶೋಷಿತ, ದಮನಿತ ಸಮು ದಾಯಗಳ ಹಕ್ಕುಗಳಿಗಾಗಿ ಹೋರಾಟ ನಡೆಸುತ್ತಿದೆ ಎಂದರು. ಕರ್ನಾಟಕದಲ್ಲಿ 24 ಜಿಲ್ಲೆಯಲ್ಲಿ ಸಂಘಟನೆಯು ಕಾನೂನು ಮತ್ತು ಮಾನವೀಯ ಮೌಲ್ಯಗಳ ಪರ ಹೋರಾಟವನ್ನು ಮುಂದುವರಿಸಿದೆ ಎಂದರು.

ಶಿವಮೊಗ್ಗ ಜಿಲ್ಲಾ ಘಟಕವನ್ನು ಪ್ರೆಸ್ ಟ್ರಸ್ಟ್ ಸಭಾಂಗಣದಲ್ಲಿ 20ರ ಬೆಳಗ್ಗೆ 11ಗಂಟೆಗೆ ಹೈಕೋರ್ಟ್ ನ್ಯಾಯವಾದಿ ಸುಧೀರ್ ಕುಮಾರ್ ಮರೊಳ್ಳಿ ಉದ್ಘಾಟಿಸುವರು.

ಹೈಕೋರ್ಟ್ ನ್ಯಾಯವಾದಿಗಳಾದ ಸರೋಜ ಪಿ. ಚಂಗೊಳ್ಳಿ, ಕೆ.ಪಿ. ಶ್ರೀಪಾಲ್, ಶಹರಾಜ್ ಸಿದ್ಧಿಕಿ ಆಗಮಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಸಂಚಾಲಕ ಆರ್.ಟಿ. ನಟರಾಜ್ ವಹಿಸುವರು. ಕಾನೂನು ಅರಿವು ಅಭಿಯಾನಗಳು: ಹಳ್ಳಿ ಹಳ್ಳಿಗಳವರೆಗೆ ಜನಸಾಮಾನ್ಯರಿಗೆ ಅವರ ಸಂವಿಧಾನಿಕ ಹಕ್ಕುಗಳನ್ನು ಪರಿಚಯಿಸುವ ಕಾರ್ಯಕ್ರಮಗಳು, ಬಡವರು, ಹಿಂದುಳಿದವರು, ಮಹಿಳೆಯರು, ಮಕ್ಕಳು, ದಲಿತರು ಮತ್ತು ಅಲ್ಪಸಂಖ್ಯಾತರಿಗಾಗಿ ನೆರವು ಮತ್ತು ಮಾರ್ಗದರ್ಶನ, ಸಾಮಾಜಿಕ ಕಾರ್ಯಕರ್ತರಿಗೆ ತರಬೇತಿ ಶಿಬಿರಗಳನ್ನು ಸಂಸ್ಥೆ ಏರ್ಪಡಿಸಲಿದೆ ಎಂದರು.

ಮರ್ದಿತ ವ್ಯಕ್ತಿಗಳ ಹಕ್ಕುಗಳನ್ನು ಕಾನೂನು ಮೂಲಕ ರಕ್ಷಿಸುವ ಪ್ರಯತ್ನ, ಅನ್ಯಾಯಕ್ಕೊಳಗಾದ ವ್ಯಕ್ತಿಗಳಿಗೆ ಉಚಿತ ಕಾನೂನು ನೆರವು ಕೊಡಿಸಲಿದೆ ಎಂದರು.

# ಎನ್‌ಎಬಿಎಲ್ ಮಾನ್ಯತೆ ಪಡೆಯುವುದು ಅವಶ್ಯ

## ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಅಧ್ಯಕ್ಷ ಬಿ.ಗೋಪಿನಾಥ್

**ಶಿವಮೊಗ್ಗ,ಜು.17:**

ವಾಣಿಜ್ಯ, ಕೈಗಾರಿಕೆ ಮತ್ತು ಆಸ್ಪತ್ರೆಗೆ ಸಂಬಂಧಿಸಿದ ಎಲ್ಲಾ ಪ್ರಯೋಗಾಲಯಗಳು ಎನ್‌ಎಬಿಎಲ್ (ನ್ಯಾಶನಲ್ ಅಕ್ರಡೆಶನ್ ಬೋರ್ಡ್ ಫಾರ್ ಟೆಸ್ಟಿಂಗ್ ಅಂಡ್ ಕ್ಯಾಲಿಬರೇಶನ್ ಲ್ಯಾಬೋರೆಟರಿಸ್) ನ ಮಾನ್ಯತೆ ಪಡೆಯುವುದು ಅತ್ಯಂತ ಮುಖ್ಯ ಎಂದು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಅಧ್ಯಕ್ಷ ಬಿ.ಗೋಪಿನಾಥ್ ಹೇಳಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಶಾಂತಲಾ ಸ್ಪೇರೋಕಾಸ್ಟ್ ಸಭಾಂಗಣದಲ್ಲಿ ಎನ್‌ಎಬಿಎಲ್ ಹಾಗೂ ಶಿವಮೊಗ್ಗ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಘದ ಸಹಭಾಗಿತ್ವದಲ್ಲಿ ಏರ್ಪಡಿಸಿದ್ದ ಎನ್‌ಎಬಿಎಲ್ ಮಾನ್ಯತಾ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.



ಎನ್‌ಎಬಿಎಲ್ ಸ್ವಾಯತ್ತ ಮಂಡಳಿ ಆಗಿದ್ದು ಕೇಂದ್ರ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದಡಿ ಬರುತ್ತದೆ. ಮಣ್ಣು, ಮೆಟಲ್, ಮೆಡಿಕಲ್, ವಾಣಿಜ್ಯ, ಕೈಗಾರಿಕೆ, ಆಸ್ಪತ್ರೆಗೆ ಸಂಬಂಧಿಸಿದ ಎಲ್ಲ ಪ್ರಯೋಗಾಲಯಗಳು ಎನ್‌ಎಬಿಎಲ್ ಮಾನ್ಯತೆ ಪಡೆಯುವುದರಿಂದ ವಿಶ್ವಾಸಾರ್ಹತೆ ಹೆಚ್ಚುತ್ತದೆ ಎಂದು ತಿಳಿಸಿದರು.

ಎನ್‌ಎಬಿಎಲ್ ಮಾನ್ಯತೆಯಿಂದ ವ್ಯವಹಾರ ವೃದ್ಧಿಯಾಗಿ ಯುವಜನರಿಗೆ ಉದ್ಯೋಗ ಸೃಷ್ಟಿಯಾಗುತ್ತದೆ. ಗ್ರಾಹಕರಿಗೆ ಗುಣಮಟ್ಟದ ಉತ್ಪನ್ನ ಮತ್ತು ಸೇವೆ ದೊರೆಯುತ್ತದೆ. ಜಿಲ್ಲೆಯ ಪ್ರಯೋಗಾಲಯಗಳು ಎನ್‌ಎಬಿಎಲ್ ಮಾನ್ಯತೆ ಪಡೆಯುವುದಕ್ಕೆ ಸಹಕರಿಸಲು ಶಿವಮೊಗ್ಗ ಜಿಲ್ಲಾ ಮತ್ತು ವಾಣಿಜ್ಯ ಕೈಗಾರಿಕಾ ಸಂಘ ಬದ್ಧವಾಗಿದೆ. ಎಂದು ಹೇಳಿದರು.

ಎನ್‌ಎಬಿಎಲ್ ಪ್ರಾಂತೀಯ ನಿರ್ದೇಶಕ ಆರ್ ಶ್ರೀಕಾಂತ್ ಮಾತನಾಡಿ, ರಾಷ್ಟ್ರೀಯ ಪರೀಕ್ಷೆ ಮತ್ತು ಮಾಪನಾಂಕ ನಿರ್ಣಯ ಪ್ರಯೋಗಾಲಯ ಮಂಡಳಿಯಲ್ಲಿ ಮಾನ್ಯತೆ ಪಡೆದ ಪ್ರಯೋಗಾಲಯಗಳು ಅಂತರಾಷ್ಟ್ರೀಯ ಮಾನದಂಡ ಮತ್ತು ಗುಣಮಟ್ಟದ ನಿರ್ವಹಣಾ ವ್ಯವಸ್ಥೆಯ ಅನುಸರಣೆ ಹೊಂದಿರುತ್ತದೆ. ಆದ್ದರಿಂದ ಗ್ರಾಹಕರ ವಿಶ್ವಾಸವನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

ಎನ್‌ಎಬಿಎಲ್ ಸಹಾಯಕ ಡೈರೆಕ್ಟರ್ ಶ್ರೀರಾಮ್, ಕೋಆರ್ಡಿನೇಟರ್ ಚೈತ್ರ ಎಂ, ಶಂಕರ್ ಪೂಜಾರಿ ಅವರು ಎನ್‌ಎಬಿಎಲ್ ಮಾನ್ಯತೆ ಬಗ್ಗೆ, ಆನ್ ಲೈನ್ ನೋಂದಣಿ ಪ್ರಕ್ರಿಯೆ ಬಗ್ಗೆ, ಮಾನ್ಯತೆ ತೆಗೆದುಕೊಂಡ ನಂತರ ಪ್ರಯೋಗಾಲಯಗಳು ಅಂತರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿ ಎನ್‌ಎಬಿಎಲ್ ಪ್ರಕ್ರಿಯೆಗಳನ್ನು ಪಾಲಿಸುವ ಬಗ್ಗೆ ರೂಪುರೇಷೆ ವಿವರಿಸಿದರು.

ಶಿವಮೊಗ್ಗ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಉಪಾಧ್ಯಕ್ಷ ಜಿ.ವಿಜಯಕುಮಾರ್, ಕಾರ್ಯದರ್ಶಿ ಎ.ಎಂ.ಸುರೇಶ್, ಖಜಾಂಚಿ ಆರ್.ಮನೋಹರ, ಕಾರ್ಯಕ್ರಮ ಸಮಿತಿ ಚೇರ್ಮನ್ ಶರತ್ ನಿರ್ದೇಶಕರಾದ ಪಿ. ರುದ್ರೇಶ್, ಎಸ್.ಎಸ್.ಉದಯಕುಮಾರ್, ಬಿ. ಸುರೇಶ್‌ಕುಮಾರ್, ಪ್ರದೀಪ್ ವಿ ಎಲಿ, ವಿನೋದ್ ಕುಮಾರ್ ಜೈನ್, ಮಾಜಿ ಅಧ್ಯಕ್ಷ ವಾಸುದೇವ್, ಕಮಲಾಕ್ಷರಪ್ಪ, ಡಾ. ವಿನಯಾ ಶ್ರೀನಿವಾಸ್, ಕೈಗಾರಿಕೆ, ಶಿಕ್ಷಣ ಸಂಸ್ಥೆ, ಆಸ್ಪತ್ರೆಗಳ ಸಿಬ್ಬಂದಿ ಉಪಸ್ಥಿತರಿದ್ದರು.